# ಜನಶ್ರೀ ಟೈಮ್ಸ್

ಕನ್ನಡ ದಿನಪತ್ರಿಕೆ

JANASHREE TIMES KANNADA DAILY NEWS PAPER

PRGI NO : KNKAN/26/A0482

ಜನಶ್ರೀವಾಣಿ

ದುಡ್ಡು ದೊಡ್ಡದೆಂದು ಬೆನ್ನತ್ತಿ ದಡ್ಡರಾಗುವುದಕ್ಕಿಂತ, ಮಾನವೀಯತೆಗೆ ಮೊರೆಹೋದ ಮನಸ್ಸದು ಮನುಷ್ಯತ್ವಕ್ಕೆ ಹಿಡಿದ ಕೈಗನ್ನಡಿ

■ ಆನಂದಯ್ಯ ವಿರಕ್ತಮಠ
ಸಂಪಾದಕರು: ಜನಶ್ರೀ ಟೈಮ್ಸ್

ಸಂಪಾದಕರು: ಆನಂದಯ್ಯ ವಿರಕ್ತಮಠ | ಸಂಪುಟ: 01 ಸಂಚಿಕೆ: 04 ಪುಟಗಳು: 04 ಬೆಲೆ: 02 ರೂ. ದಿನಾಂಕ: 19-06-2026 ಶುಕ್ರವಾರ | 73536 56555

## ಅರ್ಜಿ ಆಹ್ವಾನ

ಗದಗ: ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ವಾರ್ಡ್ ನಂ. 2 ರ ಹರಿಪೂರ. ಶಾಲೆಯಲ್ಲಿ ಖಾಲಿ ಇರುವ ಅಡಿಗೆ ಸಹಾಯಕರ ಹುದ್ದೆ ( ಬಿ1 ಕೇಂದ್ರ ) ಹಾಗೂ ಶಿರಹಟ್ಟಿ ಪಟ್ಟಣ ಪಂಚಾಯತಿ ವ್ಯಾಪ್ತಿಯ ಬಜಾರ ರಸ್ತೆಯಲ್ಲಿರುವ 9 ನೇ ವಾರ್ಡಿನ ಸರ್ಕಾರಿ ಗಂಡು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಖಾಲಿ ಇರುವ ಅಡುಗೆ ಸಹಾಯಕರ ( ಬಿ 1 ಕೇಂದ್ರ) ನೇಮಕಾತಿ ಪ್ರಕ್ರಿಯೆ ನಡೆಯಲಿದ್ದು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 24 ಕೊನೆಯ ದಿನವಾಗಿದೆ.

ಶಿರಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯ ವಾರ್ಡ ನಂ. 2 ರ ಹರಿಪೂರ ಶಾಲೆಯಲ್ಲಿ ಖಾಲಿ ಇರುವ ಅಡುಗೆ ಸಹಾಯಕರ ಹುದ್ದೆಗೆ ವಾರ್ಡಿನ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಜನಾಂಗದ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಸದರಿ ಹುದ್ದೆಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಜನಾಂಗದ ಮಹಿಳಾ ಅಭ್ಯರ್ಥಿಗಳಿಗೆ ಮೊದಲ ಆದ್ಯತೆ ನೀಡಲಾಗುವುದು. ಒಂದು ವೇಳೆ ಈ ವರ್ಗದ ಅಭ್ಯರ್ಥಿಗಳು ಯಾರೂ ಅರ್ಜಿಯನ್ನು ಸಲ್ಲಿಸದೇ ಇದ್ದ ಪಕ್ಷದಲ್ಲಿ ಹಿಂದುಳಿದ ವರ್ಗದ ಮಹಿಳಾ ಅಭ್ಯರ್ಥಿಗಳು ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದು. ಶಿರಹಟ್ಟಿ ಪಟ್ಟಣ ಪಂಚಾಯತ್ ವ್ಯಾಪ್ತಿಯ ಬಜಾರ ರಸ್ತೆಯಲ್ಲಿರುವ 9 ನೇ ವಾರ್ಡಿನ ಸರ್ಕಾರಿ ಗಂಡು ಮಕ್ಕಳ ಪ್ರಾಥಮಿಕ ಶಾಲೆಯಲ್ಲಿ ಖಾಲಿ ಇರುವ ಅಡುಗೆ ಸಹಾಯಕರ ( ಬಿ1 ಕೇಂದ್ರ) ನೇಮಕಾತಿ ಪ್ರಕ್ರಿಯೆ ನಡೆಯಲಿದ್ದು ಸದರಿ ವಾರ್ಡಿನಲ್ಲಿ ಬರುವ ಕಡ್ಡಾಯವಾಗಿ ಸಾಮಾನ್ಯ ವರ್ಗಕ್ಕೆ ಸೇರಿದ ಮಹಿಳಾ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿರಹಟ್ಟಿ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

## ಹತ್ತಿ, ತೊಗರಿ ಬೇಸಾಯ ಕ್ರಮಗಳು : ಹೊರಾವರಣ ತರಬೇತಿ

ಕೊಪ್ಪಳ: ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ ಕೊಪ್ಪಳ ಮತ್ತು ಸಹಾಯಕ ಕೃಷಿ ನಿರ್ದೇಶಕರು ಕೊಪ್ಪಳ ಇವರ ಸಹಯೋಗದಲ್ಲಿ ತೊಗರಿ ಮತ್ತು ಹತ್ತಿ ಬೆಳೆಗಳಲ್ಲಿ ಸುರಕ್ಷಿತ ಕೀಟನಾಶಕ ಬಳಕೆ ಹಾಗೂ ಸಮತೋಲಿತರಸಗೊಬ್ಬರ ಬಳಕೆ ಕುರಿತು ಅಳವಂಡಿ ಹೋಬಳಿಯ ಬಿಕನಹಳ್ಳಿ ಗ್ರಾಮದಲ್ಲಿ ಹೊರಾವರಣತರಬೇತಿ ಏರ್ಪಡಿಸಲಾಗಿತ್ತು.



ಅಧಿಕ ಸಾಂದ್ರತೆ ಹತ್ತಿ ಬೇಸಾಯ ಹಾಗೂ ತೊಗರಿ ಬೆಳೆಯ ನಿರ್ವಹಣೆ ಕುರಿತು ಕೊಪ್ಪಳ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರದ ವಿಸ್ತರಣಾ ಮುಂದಾಳು ಡಾ.ಬದರಿ ಪ್ರಸಾದ್ ಪಿ.ಆರ್. ಅವರು ಸಮಗ್ರ ಮಾಹಿತಿ ನೀಡಿದರು. ಅಲ್ಲದೇ ಬರ ಭೂಮಿ ಬೆಳೆಯಾದ ಗೋಡಂಬಿಯ ಕುರಿತು ಮಾಹಿತಿ ನೀಡಿದರು. ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರಾದ ಜೀವಂತ ಸಾಬ್ ಅವರು, ರೈತರಿಗೆ ಬೀಜೋಪಚಾರ ಮಹತ್ವ ಪರ್ಯಾಯ ರಸಗೊಬ್ಬರಗಳ ಬಗ್ಗೆ ಮಾಹಿತಿ ನೀಡಿದರು. ಸಹಾಯಕ ತೋಟಗಾರಿಕಾ ಅಧಿಕಾರಿರಾದ ಆರಿಫ್ ಅವರು, ಕೃಷಿ ಮತ್ತು ತೋಟಗಾರಿಕಾ ಪದ್ಧತಿಯ ಬಗ್ಗೆ ಮಾಹಿತಿ ಕೊಟ್ಟರು. ಕೋರಮಂಡಲ ಇಂಟರ್ನ್ಯಾಷನಲ್ ಅಧಿಕಾರಿ ಅವಿನಾಶ್ ಅವರು, ನ್ಯಾನೋ ರಸಗೊಬ್ಬರಗಳ ಹಾಗೂ ಡ್ರೋನ್ ಬಳಕೆಯ ಬಗ್ಗೆ ರೈತರಿಗೆ ಅರಿವು ಮೂಡಿಸಿದರು. ಕಾರ್ಯಕ್ರಮದಲ್ಲಿ ಕೃಷಿ ಅಧಿಕಾರಿಗಳಾದ ಪ್ರತಾಪಗೌಡ, ಮಾರುತಿ, ತಾಂತ್ರಿಕ ವ್ಯವಸ್ಥಾಪಕೆಯವರಾದ ತಾರಾ ಹಾಗೂ ನೂರಾರು ರೈತರು ಭಾಗವಹಿಸಿದ್ದರು. ಹೆಚ್ಚಿನ ಮಾಹಿತಿಗಾಗಿ ಕೃಷಿ ವಿಸ್ತರಣಾ ಶಿಕ್ಷಣ ಕೇಂದ್ರ, ಕೊಪ್ಪಳದ ವಿಜ್ಞಾನಿಗಳನ್ನು (ಡಾ. ಬದರಿ ಪ್ರಸಾದಪಿ. ಆರ್., ವಿಸ್ತರಣಾ ಮುಂದಾಳು ಮೊ. ನಂ: 9900145705) ಸಂಪರ್ಕಿಸಬಹುದು.

## ಹೊಸ ಕೈಗಾರಿಕೆಗಳ ಸ್ಥಾಪನೆಗೆ ಪರವಾನಗಿ ಸಮಸ್ಯೆ ಇದ್ದರೆ ಅರ್ಜಿ ಸಲ್ಲಿಸಲು ಡಿಐಸಿ ಕರೆ

ಕೊಪ್ಪಳ: ಜಿಲ್ಲೆಯ ಗ್ರಾಮೀಣ ಹಾಗೂ ನಗರ ಪ್ರದೇಶಗಳಲ್ಲಿ ಹೊಸ ಕೈಗಾರಿಕಾ ಘಟಕಗಳನ್ನು ಸ್ಥಾಪಿಸಲು ಆಸಕ್ತಿ ಹೊಂದಿರುವ ಭಾವಿ ಉದ್ಯಮಿಗಳಿಗೆ ಕೊಪ್ಪಳ ಜಿಲ್ಲಾ ಕೈಗಾರಿಕಾ ಕೇಂದ್ರ (ಡಿಐಸಿ) ಮಹತ್ವದ ಅವಕಾಶ ಕಲ್ಪಿಸಿದ್ದು, ಪರವಾನಗಿ ಹಾಗೂ ನಿರಾಕ್ಷೇಪಣಾ ಪತ್ರ (ಎನ್‌ಒಸಿ) ಪಡೆಯುವಲ್ಲಿ ಸಮಸ್ಯೆ ಎದುರಿಸುತ್ತಿರುವವರು ಅರ್ಜಿ ಸಲ್ಲಿಸುವಂತೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಹೊಸ ಕೈಗಾರಿಕೆಗಳ ಸ್ಥಾಪನೆಗೆ ಸಂಬಂಧಿಸಿದಂತೆ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (ಕೆಐಎಡಿಬಿ), ಸ್ಥಳೀಯ ಗ್ರಾಮ ಪಂಚಾಯತ್, ಪುರಸಭೆ, ಪಟ್ಟಣ ಪಂಚಾಯತ್, ನಗರಸಭೆ, ಜೆಸ್ಕಾಂ, ಕರ್ನಾಟಕ ರಾಜ್ಯ ಪರಿಸರ ಮಾಲಿನ್ಯ ನಿಯಂತ್ರಣ ಮಂಡಳಿ, ಕಂದಾಯ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಮತ್ತು ಸಂಸ್ಥೆಗಳಿಂದ ಎನ್‌ಒಸಿ, ಉದ್ಯಮ ಪರವಾನಗಿ ಹಾಗೂ ಕಟ್ಟಡ ಪರವಾನಗಿ ಪಡೆಯುವ ಸಂದರ್ಭದಲ್ಲಿ ಉಂಟಾಗುವ ತೊಂದರೆಗಳನ್ನು ಪರಿಹರಿಸಲು ಈ ಕ್ರಮ ಕೈಗೊಳ್ಳಲಾಗಿದೆ. ಅರ್ಜಿಗಳನ್ನು ಜಂಟಿ ನಿರ್ದೇಶಕರ ಕಚೇರಿ, ಜಿಲ್ಲಾ ಕೈಗಾರಿಕಾ ಕೇಂದ್ರ, ಮಯೂರ್ ಹೋಟೆಲ್ ಎದುರುಗಡೆ, ಹೊಸಪೇಟೆ ರಸ್ತೆ, ಕೊಪ್ಪಳ ? 583231 ವಿಳಾಸಕ್ಕೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ 08539-231548 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸಬಹುದು. ಅಲ್ಲದೆ ಇ-ಮೇಲ್ jddickpl123@gmail.com ಹಾಗೂ jd-koppal@karnatakaindustry.gov.in ವಿಳಾಸಗಳಿಗೆ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಹೊಸ ಕೈಗಾರಿಕೆಗಳ ಸ್ಥಾಪನೆಗೆ ಸಂಬಂಧಿಸಿದ ಪರವಾನಗಿ ಪ್ರಕ್ರಿಯೆಯಲ್ಲಿನ ಅಡಚಣೆಗಳನ್ನು ನಿವಾರಿಸಿ ಉದ್ಯಮ ಸ್ನೇಹಿ ವಾತಾವರಣ ನಿರ್ಮಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಕೊಪ್ಪಳ ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿಧಾನಪರಿಷತ್ ಚುನಾವಣೆ : 222 ಶಾಸಕರಿಂದ ಮತದಾನ

ಬೆಂಗಳೂರು: ವಿಧಾನ ಪರಿಷತ್ತಿನ ಏಳು ಸ್ಥಾನಗಳಿಗೆ ಇಂದು ನಡೆದ ಚುನಾವಣೆಯಲ್ಲಿ ವಿಧಾನಸಭೆಯ 222 ಶಾಸಕರು ಮತ ಚಲಾಯಿಸಿದ್ದು, ಸಂಜೆ ಮತ ಎಣಿಕೆ ನಡೆದು ಇದೇ ದಿನ ಫಲಿತಾಂಶ ಪ್ರಕಟವಾಗಲಿದೆ. ಕಾಂಗ್ರೆಸ್ 135 ಶಾಸಕರು, ಬಿಜೆಪಿಯ 62, ಜೆಡಿಎಸ್‌ನ 18, ಬಿಜೆಪಿಯ ಉಚ್ಚಾಟಿತ 3, ಸರ್ವೋದಯ ಕರ್ನಾಟಕ ಪಕ್ಷದ ದರ್ಶನ್ ಪುಟ್ಟಣ್ಣಯ್ಯ, ಕರ್ನಾಟಕ ರೈತ ಪ್ರಗತಿ ಪಕ್ಷದ ಜನಾರ್ಧನರೆಡ್ಡಿ, ಪಕ್ಷೇತರರಾದ ಗೌರಿಬಿದನೂರಿನ ಪುಟ್ಟಸ್ವಾಮಿ, ಹರಪ್ಪನ ಹಳ್ಳಿಯ ಲತಾ ಮಲ್ಲಿಕಾರ್ಜುನ್ ಅವರು ಇಂದು ವಿಧಾನ ಪರಿಷತ್ ಸದಸ್ಯರ ಆಯ್ಕೆಗೆ ಮತ ಚಲಾಯಿಸಿದ್ದಾರೆ.

ಗೃಹ ಸಚಿವ ಪರಮೇಶ್ವರ್ ಅನಾರೋಗ್ಯದ ನಡುವೆಯೂ ವಿಧಾನಸೌಧಕ್ಕೆ ಬಂದು ತಮ ಹಕ್ಕು ಚಲಾಯಿಸಿದರು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಚುನಾವಣಾ ಪ್ರಕ್ರಿಯೆಗಳಲ್ಲಿ ಭಾಗವಹಿಸಿದ್ದರು. ಕಾಂಗ್ರೆಸ್‌ನ ಬಿ.ಕೆ.ಹರಿಪ್ರಸಾದ್, ಪಿ.ವಿ.ಮೋಹನ್, ತಿಪ್ಪಣ್ಣಪ್ಪ ಕಮಕನೂರು, ಮಾಳವಳ್ಳಿ ಶಿವಣ್ಣ ಮೊದಲ 4 ಅಭ್ಯರ್ಥಿಗಳಾಗಿ ಕಣದಲ್ಲಿದ್ದು, 5ನೇ ಅಭ್ಯರ್ಥಿಯಾಗಿ ಡಿ.ಕೆ.ಶಿವಕುಮಾರ್ ಅವರ ಆಪ್ತ ವಿನಯ್ ಕಾರ್ತಿಕ್ ಸ್ಪರ್ಧಿಸಿದ್ದಾರೆ. ಬಿಜೆಪಿಯ ರಘುಕೌಟಿಲ್ಯ ಹಾಗೂ ಲಿಂಗರಾಜ್ ಪಾಟೀಲ್ ಮತ್ತು ಜೆಡಿಎಸ್ ಗೋವಿಂದರಾಜ್ ಅವರು ಅಖಾಡದಲ್ಲಿದ್ದಾರೆ. ತಲಾ ಅಭ್ಯರ್ಥಿಗೆ ಗೆಲುವಿಗೆ 28 ಮತಗಳ ಅಗತ್ಯ ಇದೆ. ಕಾಂಗ್ರೆಸ್ ಪಕ್ಷ ಕಳೆದೆರಡು ದಿನಗಳಿಂದಲೂ ಬಿಡದಿ ಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ವಾಸ್ತವ್ಯ ಹೂಡಿಸಿ, ಮತದಾನದ ಕುರಿತು ತರಬೇತಿ ನೀಡಿದೆ ಮತ್ತು ಅಣಕು ಮತದಾನವನ್ನು ನಡೆಸಿದೆ. ಇಂದು ಬೆಳಗ್ಗೆ ರೆಸಾರ್ಟ್‌ನಿಂದ ಎಲ್ಲಾ ಶಾಸಕರನ್ನು ತಲಾ 5 ಬಸ್‌ಗಳಲ್ಲಿ ವಿಧಾನಸೌಧಕ್ಕೆ ಕರೆತರಲಾಯಿತು. ಕಾಂಗ್ರೆಸ್ ಪಕ್ಷ ಮೊದಲ 4 ಅಭ್ಯರ್ಥಿಗಳಿಗೆ 30 ಮತಗಳನ್ನು ಹಂಚಿಕೆ ಮಾಡಿದ್ದು, ಪ್ರತಿಯೊಂದು ಬಸ್‌ನಲ್ಲೂ ಹಂಚಿಕೆ ಮಾಡಲಾದ ಮತಗಳ




ಶಾಸಕರು ಹಾಗೂ ಅಭ್ಯರ್ಥಿ ಜೊತೆಯಾಗಿಯೇ ಪ್ರಯಾಣಿಸಿದ್ದಾರೆ. ಹಿರಿಯ ನಾಯಕರು ಬಸ್‌ನಲ್ಲೇ ಉಳಿದು ಯಾವುದೇ ವ್ಯತ್ಯಾಸವಾಗದಂತೆ ಎಚ್ಚರಿಕೆ ವಹಿಸಿದ್ದಾರೆ.

ಡಿ.ಕೆ.ಶಿವಕುಮಾರ್, ಸಿದ್ದರಾಮಯ್ಯ, ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೇವಾಲ ಮತ್ತಿತರರು ಶಾಸಕರ ಜೊತೆಯಲ್ಲೇ ಹೆಜ್ಜೆ ಹಾಕಿದ್ದರು. ಮತಗಳು ಅಸಿಂಧುಗೊಳ್ಳದಂತೆ ಹಾಗೂ ಪ್ರಾಶಸ್ತ್ಯ ಮತದಲ್ಲಿ ಯಾವುದೇ ಗೊಂದಲಗಳಾಗದಂತೆ ಎಚ್ಚರಿಕೆ ವಹಿಸಲಾಗಿತ್ತು. ಉಪ ಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅನಾರೋಗ್ಯದಿಂದ ವಿಶ್ರಾಂತಿ ಪಡೆದಿದ್ದು, ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರ ನಿವಾಸಕ್ಕೆ ಭೇಟಿ ನೀಡಿ ಆರೋಗ್ಯ ವಿಚಾರಿಸಿದರು. ಮಧ್ಯಾಹ್ನದ ಅವರು ವಿಧಾನಸೌಧಕ್ಕೆ ಆಗಮಿಸಿ ಮತ ಹಾಕಿದರು. ದೆಹಲಿಯ ಪ್ರವಾಸದ ವೇಳೆ ಅನಾರೋಗ್ಯಕ್ಕೀಡಾಗಿದ್ದ ತಿಪಟೂರಿನ ಕೆ.ಷಡಕ್ಷರಿ ಹಾಗೂ ಅನಾರೋಗ್ಯದಿಂದ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಕಾಗವಾಡ ಕ್ಷೇತ್ರದ ರಾಜುಕಾಗೆ ವೀಲ್‌ಚೇರ್‌ನಲ್ಲಿ ಆಗಮಿಸಿ ಮತ ಚಲಾಯಿಸಿದ್ದಾರೆ.ಬಿಜೆಪಿಯ ಉಚ್ಚಾಟಿತ ಶಾಸಕರಾದ ಎಸ್.ಟಿ.ಸೋಮಶೇಖರ್, ಶಿವರಾಮ್ ಹೆಬ್ಬಾರ್ ಅವರು ಕಾಂಗ್ರೆಸ್‌ನ ಶಾಸಕ ಬಸವರಾಯರೆಡ್ಡಿ ಮತ್ತು ಮಾಜಿ ಸಂಸದ ವಿ.ಎಸ್. ಉಗ್ರಪ್ಪ ಅವರ ಜೊತೆ ಆಗಮಿಸಿ ಮತ ಚಲಾಯಿಸಿದ್ದು ವಿಶೇಷವಾಗಿತ್ತು. ಇಂದು ಬೆಳಗ್ಗೆ ಮತದಾನ ಪ್ರಕ್ರಿಯೆ ಆರಂಭವಾಗುತ್ತಿದ್ದಂತೆ ಬಿಜೆಪಿಯ ಎಲ್ಲಾ ಶಾಸಕರು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರ ಶಾಸಕಾಂಗ ಕಚೇರಿಯಲ್ಲಿ ಸಭೆ ಸೇರಿ ನಂತರ ಪಕ್ಷ ಹಂಚಿಕೆ ಮಾಡಿದ ಅಭ್ಯರ್ಥಿಗೆ ಸರದಿಯಲ್ಲಿ ಬಂದು ಮತ ಚಲಾಯಿಸಿದರು. ಬೆಳಗ್ಗೆ 11ಗಂಟೆಯ ಒಳಗೆ ಬಿಜೆಪಿಯ ಎಲ್ಲಾ ಶಾಸಕರ ಮತ ಚಲಾವಣೆ ಮುಗಿದಿತ್ತು. ಆರ್. ಅಶೋಕ್, ಭೈರತಿ ಬಸವರಾಜ್, ಪ್ರಭು ಚೌಹಾಣ್, ಬಿ.ವೈ.ವಿಜಯೇಂದ್ರ, ಅಶ್ವನಾರಾಯಣ, ರಮೇಶ್ ಜಾರಕಿಹೊಳಿ, ಮುನಿರತ್ನ ಸೇರಿದಂತೆ ಹಲವಾರು ಶಾಸಕರು ಆಗಮಿಸಿ ಮತ ಚಲಾಯಿಸಿದರು.

ಬಿಜೆಪಿ ತನ್ನ ಇಬ್ಬರು ಅಭ್ಯರ್ಥಿ ಗೆಲುವಿಗೆ ತಲಾ 30 ಚಲಾಯಿಸಿಕೊಳ್ಳಲಾದ ಮತಗಳನ್ನು ಹೊರತು ಪಡಿಸಿ ಹೆಚ್ಚುವರಿ 2 ಮತಗಳನ್ನು ಎನ್‌ಡಿಎ ಮಿತ್ರ ಪಕ್ಷವಾಗಿರುವ ಜೆಡಿಸ್ ಅಭ್ಯರ್ಥಿ ಗೋವಿಂದ ರಾಜ್‌ಗೆ ಚಲಾಯಿಸಲು ಸೂಚನೆ ನೀಡಲಾಗಿತ್ತು. ಜೆಡಿಎಸ್ ಅಭ್ಯರ್ಥಿ ಗೋವಿಂದರಾಜ್ ಪರವಾಗಿ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಕಾರ್ಯತಂತ್ರ ರೂಪಿಸಿದ್ದು, ತಮ ಪಕ್ಷದ ಎಲ್ಲಾ ಶಾಸಕರನ್ನು ನಿನ್ನೆ ದೇವನಹಳ್ಳಿ ಬಳಿಯ ಖಾಸಗಿ ರೆಸಾರ್ಟ್‌ನಲ್ಲಿ ಇರಿಸಿದ್ದರು. ಅಲ್ಲಿ ಚರ್ಚೆ ನಡೆಸಿ, ನಂತರ ಬಸ್‌ನಲ್ಲಿ ಒಟ್ಟಾಗಿ ವಿಧಾನಸಭೆಗೆ ಆಗಮಿಸಿದರು.

ಪಕ್ಷಗಳು ಹಂಚಿಕೆ ಮಾಡಿದ ಮಾದರಿಯಲ್ಲೇ ಮತದಾನವಾದರೆ, ಕಾಂಗ್ರೆಸ್‌ನ ಮೊದಲ 4 ಮತ್ತು ಬಿಜೆಪಿಯ ಇಬ್ಬರು ಅಭ್ಯರ್ಥಿಗಳು ಗೆಲುವು ಸಾಧಿಸುವುದು ಸುಲಭವಾಗಲಿದೆ. ಕಾಂಗ್ರೆಸ್‌ನ 5ನೇ ಅಭ್ಯರ್ಥಿ ವಿನಯ್ ಕಾರ್ತಿಕ್ ಮತ್ತು ಜೆಡಿಎಸ್‌ನ ಗೋವಿಂದರಾಜ್ ಅವರ ನಡುವ ಪ್ರಬಲ ಪೈಪೋಟಿ ಏರ್ಪಡುವ ಸಾಧ್ಯತೆ ಇದೆ. ಮತದಾನ ಮಾಡಿದ ಬಳಿಕ ಜೆಡಿಎಸ್‌ನ ಜಿ.ಟಿ.ದೇವೇಗೌಡ, ತಮ ಪಕ್ಷದ ಗೋವಿಂದರಾಜ್ ಗೆಲುವು ಸಾಧಿಸುತ್ತಾರೆ. ಚುನಾವಣೆ ಕಾರಣಕ್ಕಾಗಿ ಡಿ.ಕೆ.ಶಿವಕುಮಾರ್ ಸೇರಿದಂತೆ ತಮಗೆ ಎಲ್ಲರೂ ಕರೆ ಮಾಡಿದ್ದಾರೆ. ನಾನು ಆತಸಾಕ್ಷಿಯ ಮತ ಹಾಕಿದ್ದೇನೆ ಎಂದು ಹೇಳಿ ಅಚ್ಚರಿ ಮೂಡಿಸಿದರು.

ಬಿಜೆಪಿಯ ಉಚ್ಚಾಟಿತ ಶಾಸಕರ ಪೈಕಿ ಶಿವರಾಮ್ ಹೆಬ್ಬಾರ್, ಎಸ್.ಟಿ.ಸೋಮಶೇಖರ್ ಕಾಂಗ್ರೆಸ್ ಶಾಸಕರ ಜೊತೆ ಆಗಮಿಸಿದ್ದು ಕುತೂಹಲ ಕೆರಳಿಸಿದ್ದರೆ, ಮತ್ತೊಬ್ಬ ಉಚ್ಚಾಟಿತ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ತಾವು ಬಿಜೆಪಿ ಅಭ್ಯರ್ಥಿಗೆ ಮತ ಚಲಾಯಿಸುವುದಾಗಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷರಿಗೆ ಪತ್ರ ಬರೆದು ತಿಳಿಸಿದ್ದಾರೆ. ಎಸ್.ಟಿ.ಸೋಮಶೇಖರ್ ತಾವು ಆತಸಾಕ್ಷಿ ಮತವನ್ನು ಕಾಂಗ್ರೆಸ್‌ಗೆ ಹಾಕಿರುವುದಾಗಿ ಬಹಿರಂಗ ಪಡಿಸಿದ್ದಾರೆ. ಪಕ್ಷೇತರ ಅಭ್ಯರ್ಥಿಗಳಿಗೆ ಈ ಚುನಾವಣೆಯಲ್ಲಿ ಭಾರೀ ಬೇಡಿಕೆ ಸೃಷ್ಟಿಯಾಗಿತು.?ತ ಕಳೆದ ಮೂರ್ನಾಲ್ಕು ದಿನಗಳಿಂದ ನಡೆದ ರಣತಂತ್ರಗಳು ಯಾವ ಮಟ್ಟಿಗೆ ಫಲ ನೀಡಿವೆ ಎಂದು ಸಂಜೆ ಮತ ಎಣಿಕೆಯ ಬಳಿಕ ತಿಳಿದು ಬರಲಿದೆ.

## ಎಲ್ಲಾ ಅಧಿಕಾರಿ, ನೌಕರರು ಕಡ್ಡಾಯವಾಗಿ ಕರ್ತವ್ಯ ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೊಂದಾಯಿಸಿಕೊಳ್ಳಿ : ಡಿಸಿ

ಕೊಪ್ಪಳ: ಕೊಪ್ಪಳ ಜಿಲ್ಲೆಯಲ್ಲಿ ಕರ್ತವ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಮತ್ತು ನೌಕರರು ಕಡ್ಡಾಯವಾಗಿ ಕರ್ತವ್ಯ ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೊಂದಾಯಿಸಿಕೊಳ್ಳುವಂತೆ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸೂಚನೆ ನೀಡಿದ್ದಾರೆ.



ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಬೆಂಗಳೂರು ರವರು ಟಿಪ್ಪಣಿ ಪತ್ರದಲ್ಲಿ ತಿಳಿಸಿರುವಂತೆ, ಮಾನ್ಯ ಮುಖ್ಯಮಂತ್ರಿಯವರು ಇತ್ತೀಚೆಗೆ (ಜೂ. 4ರಂದು) ನಡೆದ ಎಲ್ಲಾ ಕಾರ್ಯದರ್ಶಿಗಳ ಸಭೆಯಲ್ಲಿ ಎಲ್ಲಾ ಸರ್ಕಾರಿ ಅಧಿಕಾರಿ, ನೌಕರರು ಕಡ್ಡಾಯವಾಗಿ ಸಮಯಕ್ಕೆ ಸರಿಯಾಗಿ ಕಚೇರಿಯಲ್ಲಿ ಹಾಜರಿರುವಂತೆ ಸೂಚಿಸಿರುತ್ತಾರೆ. ಅದರಂತೆ ಎಲ್ಲಾ ಅಧಿಕಾರಿ, ನೌಕರರು ಕರ್ತವ್ಯ (ಕಾಮ್ಸ್) (KARTAVYA (KAAMS)) ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೋಂದಣಿ ಮಾಡಿಕೊಂಡು ಪ್ರತಿದಿನ ತಮ್ಮ ಹಾಜರಾತಿಯನ್ನು ಕಡ್ಡಾಯವಾಗಿ ದಾಖಲಿಸಬೇಕಿರುತ್ತದೆ.

ಜೂನ್ 16ರ ಅಂಕಿಅಂಶಗಳ ಪ್ರಕಾರ ರಾಜ್ಯದಲ್ಲಿ ಇದುವರೆಗೂ 2,13,925 ಅಧಿಕಾರಿ, ನೌಕರರು ಕರ್ತವ್ಯ ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೋಂದಾಯಿಸಿಕೊಂಡಿರುವುದಿಲ್ಲ.

ಈ ಪ್ರಯುಕ್ತ ಇದುವರೆಗೂ ಕರ್ತವ್ಯ ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೋಂದಾಯಿಸದ ಅಧಿಕಾರಿ, ನೌಕರರನ್ನು ಕಡ್ಡಾಯವಾಗಿ ನೋಂದಾಯಿಸಿಕೊಳ್ಳಲು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡುವಂತೆ ಹಾಗೂ ಈ ಬಗ್ಗೆ ಕೈಗೊಂಡ ಕ್ರಮದ ವರದಿಯನ್ನು 7 ದಿನಗಳೊಳಗಾಗಿ ಸಲ್ಲಿಸುವಂತೆ ಸೂಚಿಸಿರುತ್ತಾರೆ. ಆದ್ದರಿಂದ ಸರ್ಕಾರದ ಮುಖ್ಯ ಕಾರ್ಯದರ್ಶಿಗಳು ನಿರ್ದೇಶಿಸಿದಂತೆ, ಕೊಪ್ಪಳ ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ಇಲಾಖಾ ವ್ಯಾಪ್ತಿಗೊಳಪಡುವ ಕಚೇರಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಎ, ಬಿ, ಸಿ ಮತ್ತು ಡಿ ವೃಂದದ ಅಧಿಕಾರಿ ಮತ್ತು ನೌಕರರು ಕಡ್ಡಾಯವಾಗಿ ಕರ್ತವ್ಯ (ಕಾಮ್ಸ್) (KARTAVYA (KAAMS)) ಮೊಬೈಲ್ ಅಪ್ಲಿಕೇಷನ್‌ನಲ್ಲಿ ನೋಂದಣಿ ಈ ವಿಷಯದಲ್ಲಿ ಕೈಗೊಂಡ ಕ್ರಮದ ಬಗ್ಗೆ ಮೂರು ದಿನಗಳ ಒಳಗಾಗಿ ವರದಿಯನ್ನು ಜಿಲ್ಲಾಧಿಕಾರಿಗಳ ಕಾರ್ಯಾಲಯಕ್ಕೆ ತಪ್ಪದೇ ಸಲ್ಲಿಸುವಂತೆ ಪ್ರಕಟಣೆ ತಿಳಿಸಿದೆ.

## ಒಂದು ದಿನದ ಉದ್ಯಮಶೀಲತಾ ಶಿಬಿರ

ಗದಗ: ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಕರ್ನಾಟಕ ಸರ್ಕಾರ ಇವರ ಸಹಯೋಗದಲ್ಲಿ ಕರ್ನಾಟಕ ಉದ್ಯಮ ಶೀಲತಾಭಿವೃದ್ಧಿ ಕೇಂದ್ರ (ಸಿಡಾಕ್), ಧಾರವಾಡ ಇವರು ಸ್ವಂತ ಉದ್ಯೋಗ ಕೈಗೊಳ್ಳಲು ಆಸಕ್ತಿ ಇರುವ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪುರಷ ಹಾಗೂ ಮಹಿಳೆಯರಿಗೆ 1 ದಿನದ ಉದ್ಯಮಶೀಲತಾ ತಿಳುವಳಿಕೆ ಶಿಬಿರವನ್ನು ಜೂನ್ 22 ಸೋಮವಾರದಂದು ನಗರದ ಮಹೇಶ್ವರಿ ವಿವಿದೊದ್ದೇಶಗಳ ಮಹಿಳಾ ಮಂಡಳದಲ್ಲಿ ಹಮ್ಮಿಕೊಳ್ಳಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಗದಗ ಸಿಡಾಕ್ ಜಿಲ್ಲಾ ಕಚೇರಿ, ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಚೇರಿ ಆವರಣ, ರೂಮ್ ನಂ: 106, ಜಿಲ್ಲಾ ಆಡಳಿತ ಭವನ , ಹಾಗೂ ದೂರವಾಣಿ ಸಂಖ್ಯೆ7795855847,8722759959 ಸಂಪರ್ಕಿಸಬಹುದು ಎಂದು ಸಿಡಾಕ್ ಜಂಟಿ ನಿರ್ದೇಶಕರು ಪ್ರಕಟಣೇಯಲ್ಲಿ ತಿಳೀಸಿದ್ದಾರೆ.

**ಜನಶ್ರೀ ಟೈಮ್ಸ್**

**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ವಿಜಯನಗರ ಕಾಲೋನಿಯಲ್ಲಿ ಮಕ್ಕಳ ಹಕ್ಕುಗಳು, ಕಾನೂನು & ಸುರಕ್ಷತೆಯ ಜಾಗೃತಿ

ಕೊಪ್ಪಳ: ಕೊಪ್ಪಳ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಸಹಯೋಗದೊಂದಿಗೆ ಭಾಗ್ಯನಗರದ ವಿಜಯನಗರ ಕಾಲೋನಿಯಲ್ಲಿ ಮಂಗಳವಾರ (ಜೂ. 16ರಂದು) ಮಕ್ಕಳ ಹಕ್ಕುಗಳು, ಕಾನೂನುಗಳು ಮತ್ತು ಮಕ್ಕಳ ಸುರಕ್ಷತೆ ಕುರಿತು ಜಾಗೃತಿ ಕಾರ್ಯಕ್ರಮ ಜರುಗಿತು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಾನೂನು ಪರೀವಿಕ್ಷಣಾಧಿಕಾರಿಗಳಾದ ಶಿವಲೀಲಾ ವನ್ನೂರು ಅವರು ಮಾತನಾಡಿ, ಮಕ್ಕಳೆಂದರೆ ಹೆಣ್ಣಿರಲಿ ಗಂಡು ಇರಲಿ 18 ವರ್ಷದೊಳಗಿನವರನ್ನು ನಾವು ಮಕ್ಕಳೆಂದು ಕರೆಯುತ್ತೇವೆ. ಮಕ್ಕಳ ನಡುವೆ ಎಂತಹದ್ದೇ ಕಾರಣಕ್ಕೂ ತಾರತಮ್ಯ ಮಾಡದಂತೆ ಹಾಗೂ ಮಕ್ಕಳಲ್ಲಿ ಕೀಳರಿಮೆಯನ್ನು ಉಂಟುಮಾಡದಂತೆ ಎಲ್ಲ ವಯಸ್ಕರು ಎಚ್ಚರವಹಿಸಬೇಕು. ಹುಟ್ಟಿದ ಎಲ್ಲ ಮಕ್ಕಳು ಆರೋಗ್ಯದಿಂದ ಜೀವಿಸುವ ಮತ್ತು ಬೆಳೆಯುವ ಹಕ್ಕನ್ನು ಸ್ವಾಭಾವಿಕವಾಗಿ ಹೊಂದಿದ್ದಾರೆ. ಹಿರಿಯರು ಮಕ್ಕಳ ಅಭಿಪ್ರಾಯಗಳಿಗೆ ಮನ್ನಣೆ ನೀಡಬೇಕು. ಪ್ರತಿಯೊಂದು ಮಗು ಶಾಲೆಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕು ಎಂದರು.

ಮಕ್ಕಳು ಮತ್ತು ಮಹಿಳೆಯರು ಭಿಕ್ಷಾಟನೆಗೆ ತೆರಳದಂತೆ ಕುಟುಂಬ ಹಾಗೂ ಸ್ಥಳಿಕರು ಸಮುದಾಯದಲ್ಲಿ ಜಾಗೃತಿ



ಮೂಡಿಸಬೇಕು. ಸರ್ಕಾರದಿಂದ ಮಹಿಳೆಯರಿಗಾಗಿ ದೊರೆಯುವಂತಹ ಉದ್ಯೋಗಿನಿ ಯೋಜನೆ, ಗೃಹಲಕ್ಷ್ಮೀ ಯೋಜನೆಗಳ ಲಾಭ ಪಡೆದುಕೊಂಡು ವಿವಿಧ ಕೌಶಲ್ಯ ಕಲಿತು ವ್ಯಾಪಾರ ಮಾಡುವ ನಿಟ್ಟಿನಲ್ಲಿ ಸ್ವಾಲಂಬಿ ಬದಕು ಮಾಡಬೇಕು. ಮಕ್ಕಳಿಗೆ ಇರುವಂತಹ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ-2009ರ ಅಡಿಯಲ್ಲಿ ಪ್ರತಿಯೊಂದು ಮಗು ಶಿಕ್ಷಣದಿಂದ ವಂಚಿತವಾಗಬಾರದು. ತಂದೆ-ತಾಯಿ ತೀರಿದ ಮಗು ಪೋಷಕರೊಂದಿಗೆ ವಾಸವಾಗಿದ್ದು ಶಾಲೆಗೆ ಹೋಗುತ್ತಿದ್ದರೆ ಅಂತಹ ಮಕ್ಕಳಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದಲ್ಲಿ ಪ್ರಾಯೋಜಿಕತ್ವ ಯೋಜನೆ ಸೌಲಭ್ಯ ಪಡೆದು ಆರ್ಥಿಕವಾಗಿ ಸಂಕಷ್ಟದಿಂದ ದೂರವಾಗುವಂತೆ ಅನುಕೂಲತೆಯನ್ನು ಪಡೆಯಬೇಕು. ಲೈಂಗಿಕ ಅಪರಾಧಗಳಿಂದ ಮಕ್ಕಳ ರಕ್ಷಣಾ ಕಾಯಿದೆ-2012 ರಲ್ಲಿ ಜಾರಿಗೆ ಬಂದಿದ್ದು, ಯಾವುದೇ ವ್ಯಕ್ತಿ ಲೈಂಗಿಕ ದೌರ್ಜನ್ಯ ಎಸಗಿದರೆ ಮತ್ತು ಮಕ್ಕಳ ದೆಹದ ಮೇಲೆ ಅಸುರಕ್ಷತ ಸ್ಪರ್ಶ ಮಾಡಿದರೆ ಘಟನೆಯ ಸ್ವರೂಪದ ಆಧಾರದ ಮೇಲೆ 20 ರಿಂದ ಜೀವಾವಧಿ ಮತ್ತು ಗಲ್ಲು ಶಿಕ್ಷೆಯನ್ನು ಸಹ ವಿಧಿಸಬಹುದು ಎಂದರು.

ಅಕ್ಕಪಡೆ ಪೊಲೀಸ್ ಅಧಿಕಾರಿ ಸಾವಿತ್ರಿ ಡಿ. ಅವರು ಮಾತನಾಡಿ, ಜಿಲ್ಲೆಯಲ್ಲಿ ರೈಲ್ವೆ ಸ್ಟೇಷನಗಳು, ಬಸ್ಸ್ ನಿಲ್ದಾಣಗಳಲ್ಲಿ, ದೇವಸ್ಥಾನ, ಸಿನಿಮಾ ಟಾಕೇಜ್, ಪ್ರವಾಸಿ ತಾಣಗಳಲ್ಲಿ, ಮಾಲ್‌ಗಳಲ್ಲಿ, ಬೀದಿಗಳಲ್ಲಿ, ಶಾಲಾ ಕಾಲೇಜ್‌ಗಳಲ್ಲಿ ಮತ್ತು ಕುಟುಂಬ ಹಾಗೂ ಸಮುದಾಯಗಳಲ್ಲಿ ಮಹಿಳೆಯರ ಮತ್ತು ಮಕ್ಕಳ ಮೇಲೆ ದೈಹಿಕ, ಲೈಂಗಿಕ, ಮಾನಸಿಕ ಹಿಂಸೆಗಳು ಏನಾದರು ಯಾವುದೇ ವ್ಯಕ್ತಿ ನೀಡಿದಲ್ಲಿ ಅಕ್ಕಪಡೆಯ ಸಂಖ್ಯೆ 181 ಗೆ ಕರೆ ಮಾಹಿತಿ ನೀಡಿದರೆ, ಆ ಸ್ಥಳಕ್ಕೆ ಅಕ್ಕಪಡೆಯ ತಂಡ ರಕ್ಷಣೆಗಾಗಿ ಧಾವಿಸುತ್ತದೆ. ಹಾಗೂ ದಿನದ 24 ಗಂಟೆಗಳ ಕಾಲ ಕಾರ್ಯನಿರ್ವಹಿಸುವ ತುರ್ತು ಪೊಲೀಸ್ ಉಚಿತ ಸಹಾಯವಾಣಿ ಸಂಖ್ಯೆ 112 ಗೂ ಸಹ ಕರೆ ಮಾಡಿ ಮಾಹಿತಿ ನೀಡಬಹುದು ಎಂದರು.

ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಮಕ್ಕಳ ಸಹಾಯವಾಣಿ ಸಂಯೋಜಕ ಶರಣಪ್ಪ ಅವರು ಮಾತನಾಡಿ, ಬಾಲ್ಯ ವಿವಾಹ, ಬಾಲಕಾರ್ಮಿಕ, ಮಕ್ಕಳ ಭಿಕ್ಷಾಟನೆ ಲೈಂಗಿಕ ದೌರ್ಜನ್ಯ, ಕಾಣೆಯಾದ ಮಗು, ಮಗುಪತ್ತೆ, ಬಿದಿಯಲ್ಲಿ ಬಿಸಾಕಿದ ಮಗು, ಶಾಲೆಯಿಂದ ಹೊರಗುಳಿದ ಮಕ್ಕಳು ಕಂಡುಬಂದಲ್ಲಿ ದಿನದ 24 ಗಂಟೆಗಳ ಕಾಲ ಚಾಲನೆಯಲ್ಲಿರುವ ಉಚಿತ ದೂರವಾಣಿ ಸಂಖ್ಯೆ ಮಕ್ಕಳ ಸಹಾಯವಾಣಿ 1098 ಕ್ಕೆ ಕರೆ ಮಾಡಿ ಮಾಹಿತಿ ನೀಡಬಹುದು. ಮಾಹಿತಿ ನೀಡಿದವರ ಹೆಸರನ್ನು ಗೌಪ್ಯವಾಗಿ ಇಟ್ಟು ಮಗುವಿನ ರಕ್ಷಣೆ ವಿವಿಧ ಇಲಾಖೆಯ ಸಹಯೋಗದೊಂದಿಗೆ ಮಾಡಲಾಗುತ್ತದೆ ಎಂದರು. ಈ ಸಂದರ್ಭದಲ್ಲಿ ನಾಗರತ್ನ ಮತ್ತು ಚೈತ್ರ, ಶರಣಪ್ಪ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

# ಅಂಗಾಂಗ ದಾನ ಅಕ್ರಮ ಜಾಲ : ಕೇರಳದಲ್ಲಿ ಇಡಿ ದಾಳಿ

ಕೊಚ್ಚಿ: ನಕಲಿ ದಾಖಲೆಗಳನ್ನು ಬಳಸಿ ಅಕ್ರಮ ಅಂಗಾಂಗ ದಾನಕ್ಕೆ ನೆರವಾಗುತ್ತಿದ್ದ ಆರೋಪದ ಜಾಲಕ್ಕೆ ಸಂಬಂಧಿಸಿದ ಹಣ ಅಕ್ರಮ ರ್‍ವಾವಣೆ ಪ್ರಕರಣದ ತನಿಖೆಯ ಭಾಗವಾಗಿ ಜಾರಿ ನಿರ್ದೇಶನಾಲಯ (ಇಡಿ)ಇಂದು ಕೇರಳದ ವಿವಿಧ ಆಸ್ಪತ್ರೆಗಳು ಹಾಗೂ ನಿವಾಸಗಳ ಮೇಲೆ ದಾಳಿ ನಡೆಸಿದೆ. ಅಧಿಕಾರಿಗಳ ಪ್ರಕಾರ, ಕೊಚ್ಚಿ, ತಿರುವನಂತಪುರಂ ಹಾಗೂ ಕೊಟ್ಟಾಯಂ ಜಿಲ್ಲೆಗಳಲ್ಲಿರುವ ಆಸ್ಪತ್ರೆಗಳು ಮತ್ತು ನಿವಾಸಗಳು ಸೇರಿದಂತೆ ಒಟ್ಟು ಐದು ಸ್ಥಳಗಳಲ್ಲಿ ಮುಂಜಾನೆ ಶೋಧ ಕಾರ್ಯಾಚರಣೆ ಆರಂಭಿಸಲಾಯಿತು.




ಇಡಿ ಮೂಲಗಳ ಪ್ರಕಾರ, ಕಳೆದ ಕೆಲವು ರ್‍ಷಗಳಿಂದ ಅಕ್ರಮ ಅಂಗಾಂಗ ದಾನ ವ್ಯವಸ್ಥೆ ನಡೆಸುತ್ತಿದ್ದ ಜಾಲದ ವಿರುದ್ಧ ಕೇರಳದ ವಿವಿಧ ಜಿಲ್ಲೆಗಳಲ್ಲಿ ಪೊಲೀಸರು ದಾಖಲಿಸಿದ್ದ ಹಲವು ಎಫ್‌ಐಆರ್‌ಗಳ ಆಧಾರದ ಮೇಲೆ ತನಿಖೆ ಆರಂಭಿಸಲಾಗಿದೆ. ಪ್ರಾಥಮಿಕ ತನಿಖೆಯಲ್ಲಿ ಆರೋಪಿಗಳು ಅಂಗಾಂಗ ದಾನಿಗಳು, ಅಂಗಾಂಗ ಸ್ವೀಕರಿಸುವವರು ಹಾಗೂ ಆಸ್ಪತ್ರೆಗಳ ನಡುವೆ ಮಧ್ಯ-ರ್‍ತಿಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಅಂಗಾಂಗ ದಾನ ವ್ಯವಸ್ಥೆ ಕಲ್ಪಿಸಲು ದೊಡ್ಡ ಮೊತ್ತದ ಹಣ ವಸೂಲಿ ಮಾಡುತ್ತಿದ್ದರು ಎಂಬುದು ಬೆಳಕಿಗೆ ಬಂದಿದೆ. ಈ ಮಾಹಿತಿಯ ಆಧಾರದ ಮೇಲೆ ಇಡಿ ಹಣ ಅಕ್ರಮ ರ್‍ವಾವಣೆ ಪ್ರಕರಣ ದಾಖಲಿಸಿ ತನಿಖೆ ಆರಂಭಿಸಿದೆ. ಪ್ರಮುಖ ಆರೋಪಿ ನಜೀಬ್ ಜೊತೆ ಹಣ-ಕಾಸು ವ್ಯವಹಾರ ನಡೆಸಿರುವ ಶಂಕೆಯಿರುವ ಆಸ್ಪತ್ರೆಗಳ ಮೇಲೂ ಶೋಧ ಕಾರ್ಯಾಚರಣೆ ನಡೆಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕೊಚ್ಚಿಯಲ್ಲೇ ಮೂರು ಸ್ಥಳಗಳಲ್ಲಿ ದಾಳಿ ನಡೆದಿದ್ದು, ಬೆಳಿಗ್ಗೆ 6 ಗಂಟೆಯಿಂದಲೇ ಏಕಕಾಲದಲ್ಲಿ ಕಾರ್ಯಾಚರಣೆ ಆರಂಭಗೊಂಡಿದೆ. ತನಿಖಾಧಿಕಾರಿಗಳು ಅಂಗಾಂಗ ದಾನಕ್ಕೆ ಸಂಬಂಧಿಸಿದ ಬ್ಯಾಂಕ್ ವಹಿವಾಟುಗಳು ಹಾಗೂ ವೈದ್ಯಕೀಯ ದಾಖಲೆಗಳನ್ನು ಪರಿಶೀಲಿಸುತ್ತಿದ್ದಾರೆ. ಪೊಲೀಸ್ ತನಿಖೆಯ ಪ್ರಕಾರ, ಅಂಗಾಂಗ ದಾನ ಪ್ರಕ್ರಿಯೆಯಲ್ಲಿ ಪೊಲೀಸ್ ಇಲಾಖೆ, ಸ್ಥಳೀಯ ಸಂಸ್ಥೆಗಳು, ವೈದ್ಯರು, ಶಾಸಕರು ಹಾಗೂ ಸಂಸದ-ರಿಂದ ಅಗತ್ಯ ಪ್ರಮಾಣಪತ್ರಗಳು ಮತ್ತು ಅನುಮೋದನೆಗಳನ್ನು ಪಡೆಯಬೇಕಾಗುತ್ತದೆ. ಆರೋಪಿಗಳು ಈ ನಿಯಮಗಳನ್ನು ತಪ್ಪಿಸಲು ನಕಲಿ ದಾಖಲೆಗಳನ್ನು ಬಳಸಿದ್ದಾರೆ ಎನ್ನಲಾಗಿದೆ. ಪೊಲೀಸ್ ಎಫ್‌ಐಆರ್‌ಗಳ ಪ್ರಕಾರ, ಈ ಜಾಲವು 2023ರ ಆಗಸ್ಟ್‌ನಿಂದ ಸಕ್ರಿಯವಾಗಿದ್ದು, ಕೊಚ್ಚಿಯ ಎರಡು ಖಾಸಗಿ ಆಸ್ಪತ್ರೆಗಳ ಲೆಟರ್‌ಹೆಡ್‌ಗಳು, ಪೊಲೀಸ್ ಕ್ಲಿಯರೆನ್?ಸ ಪ್ರಮಾಣಪತ್ರಗಳು, ಶಾಸಕರು, ಸಂಸದರು ಹಾಗೂ ಪೊಲೀಸ್ ಅಧಿಕಾರಿಗಳ ಹೆಸರಿನಲ್ಲಿನ ಪತ್ರಗಳನ್ನು ನಕಲಿ ಮಾಡಿರುವ ಆರೋಪವಿದೆ. ಇದಲ್ಲದೆ, ಹಲವಾರು ಖ್ಯಾತ ವೈದ್ಯರ ಶಿಫಾರಸು ಪತ್ರಗಳನ್ನೂ ಕೃತಕವಾಗಿ ಸೃಷ್ಟಿಸಲಾಗಿದೆ ಎಂದು ಪೊಲೀಸರು ಆರೋಪಿಸಿದ್ದಾರೆ. ಈ ಜಾಲವು ಕೇರಳದಾದ್ಯಂತ ಕರ್‍ಯನರ್‍ವಹಿಸುತ್ತಿದ್ದ ಕಾರಣ, ಹಲವು ಜಿಲ್ಲೆಗಳಲ್ಲಿ ಪ್ರತ್ಯೇಕ ಪ್ರಕರಣಗಳು ದಾಖಲಾಗಿವೆ. ಪ್ರಕರಣದ ಪ್ರಮುಖ ಆರೋಪಿ ಕಾಸರಗೋಡು ಮೂಲದ ನಜೀಬ್‌ನನ್ನು ಪೊಲೀಸರು ಕಳೆದ ತಿಂಗಳು ಉತ್ತರ ಪ್ರದೇಶದಲ್ಲಿ ಬಂಧಿಸಿದ್ದರು. ಇದೀಗ ಇಡಿ ಹಣಕಾಸು ವಹಿವಾಟಿನ ಜಾಡು ಪತ್ತೆಹಚ್ಚಲು ವ್ಯಾಪಕ ತನಿಖೆ ಮುಂದುವರಿಸಿದೆ.

# ರಾಮನ ದೇಣಿಗೆ ಲೂಟಿ ಪ್ರಕರಣದ ವಿಚಾರಣೆ ತೀವ್ರಗೊಳಿಸಿದ ಎಸ್‌ಐಟಿ



ಲಕ್ನೋ: ಅಯೋಧ್ಯೆ ರಾಮಮಂದಿರ ದೇಣಿಗೆ ಲೂಟಿ ಪ್ರಕರಣದ ತನಿಖೆಯನ್ನು ಎಸ್‌ಐಟಿ ತೀವ್ರಗೊಳಿಸಿದೆ. ಇದುವರೆಗೂ ಟ್ರಸ್ಟ್ ಪದಾಧಿಕಾರಿಗಳು, ಸಿಬ್ಬಂದಿ ಸೇರಿ 42 ಜನರನ್ನು ವಿಚಾರಣೆಗೆ ಒಳಪಡಿಸಲಾಗಿದೆ. 2021ರಿಂದ ಇಲ್ಲಿಯವರೆಗಿನ ದಾಖಲೆಗಳ ಪರಿಶೀಲನೆ ಮಾಡಲಾಗಿದೆ. ಜೊತೆಗೆ, ನೇಮಕಾತಿ ಪ್ರಕ್ರಿಯೆ, ದೇಣಿಗೆ ಸ್ವೀಕರಿಸುವ ಸಿಬ್ಬಂದಿಯ ಪೂರ್ವಾಪರ ವಿಚಾರಿಸಿ, ಹೊಣೆಗಾರಿಕೆಗಳ ಬಗ್ಗೆ ಪರಾಮರ್ಶಿಸಿದೆ. ಜೊತೆಗೆ, ದೇಣಿಗೆ ವಿಭಾಗದ ಮುಖ್ಯವಾಗಿ ಹಣ ಎಣಿಕೆ ಹಾಗೂ ಉಸ್ತುವಾರಿ ಸಿಬ್ಬಂದಿಯ ಹೇಳಿಕೆ ದಾಖಲಿಸಿಕೊಂಡಿದೆ.

ಇನ್ನೂ, ರಾಮಮಂದಿರ ನಿರ್ಮಾಣ ಸಮಿತಿ ಅಧ್ಯಕ್ಷ ನೃಪೇಂದ್ರ ಮಿಶ್ರಾ ಪ್ರತಿಕ್ರಿಯಿಸಿ, ಎಸ್‌ಐಟಿ ತನಿಖೆಗೆ ಸಂಪೂರ್ಣ ಸಹಕಾರ ನೀಡ್ತೇವೆ. ಅಂದಹಾಗೆ, ಎಸ್‌ಐಟಿಯು 7 ದಿನಗಳ ಒಳಗೆ ಪ್ರಾಥಮಿಕ ವರದಿ ಹಾಗೂ 15 ದಿನಗಳ ಒಳಗೆ ಅಂತಿಮ ವರದಿಯನ್ನು ಯೋಗಿ ಆದಿತ್ಯನಾಥ್ ಸರ್ಕಾರಕ್ಕೆ ಸಲ್ಲಿಸಬೇಕಿದೆ. ಮೂರು ದಿನಗಳಿಂದ ದೇವಾಲಯದಲ್ಲೇ ಬೀಡುಬಿಟ್ಟಿರುವ ಎಸ್‌ಐಟಿ ತಂಡ ರಾಮ ಮಂದಿರಕ್ಕೆ ಸಂಬಂಧಿಸಿದ 42 ಸಿಬ್ಬಂದಿಯನ್ನು ವಿಚಾರಣೆ ನಡೆಸಿದೆ. ಜೊತೆಗೆ ನಿರ್ಮಾಣ ಉಸ್ತುವಾರಿ ಗೋಪಾಲ್ ರಾವ್ ಅವರನ್ನು ಸಹ ವಿಚಾರಣೆ ನಡೆಸಿದೆ ಎಂದು ಮೂಲಗಳು ತಿಳಿಸಿವೆ. ಆನಂತರ ಶ್ರೀ ರಾಮ ಜನ್ಮಭೂಮಿ ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಚಂಪತ್ ರಾಯ್ ಅವರೊಂದಿಗೆ ಸಂವಹನ ನಡೆಸಿ, ಇದಕ್ಕೆ ಸಂಬಂಧಿಸಿದ ದಾಖಲೆಗಳನ್ನು ಪಡೆದುಕೊಂಡಿದೆ. ಏನಿದು ಪ್ರಕರಣ?ರಾಮಮಂದಿರ ನಿರ್ಮಾಣದ ಸಂದರ್ಭದಲ್ಲಿ ಹಾಗೂ ಅದಾದ ಬಳಿಕ ದೇಣಿಗೆ ಲೂಟಿಯಾಗಿದೆ ಎಂಬ ಆರೋಪಗಳು ಕೇಳಿಬಂದಿದ್ದವು. 2021ರಲ್ಲಿ ರಾಮಮಂದಿರ ಟ್ರಸ್ಟ್ ಖರೀದಿಸಿದ ಭೂಮಿಯ ಬೆಲೆಯಲ್ಲಿ ಭಾರಿ ವ್ಯತ್ಯಾಸವಿದೆ, ಕೆಲವೇ ನಿಮಿಷಗಳಲ್ಲಿ ಕೋಟ್ಯಂತರ ರೂಪಾಯಿ ಲಾಭ ಮಾಡಿಕೊಳ್ಳಲಾಗಿದೆ ಎಂದು ವಿರೋಧ ಪಕ್ಷಗಳು ಆರೋಪಿಸಿದ್ದವು. ಆದರೆ ಟ್ರಸ್ಟ್ ಈ ಆರೋಪವನ್ನು ತಳ್ಳಿಹಾಕಿ, ಎಲ್ಲಾ ವ್ಯವಹಾರಗಳು ಪಾರದರ್ಶಕವಾಗಿ ಬ್ಯಾಂಕ್ ಮುಖಾಂತರವೇ ನಡೆದಿವೆ ಮತ್ತು ಮಾರುಕಟ್ಟೆ ದರದಲ್ಲೇ ಭೂಮಿ ಖರೀದಿಸಲಾಗಿದೆ ಎಂದು ಸ್ಪಷ್ಟನೆ ನೀಡಿತ್ತು. ಆನಂತರ ರಾಮಮಂದಿರದ ಹೆಸರಿನಲ್ಲಿ ಸಾರ್ವಜನಿಕರಿಂದ ಹಣ ಲೂಟಿ ಮಾಡಲು ಕೆಲವು ಸೈಬರ್ ವಂಚಕರು ನಕಲಿ ವೆಬ್‌ಸೈಟ್‌ಗಳು, ನಕಲಿ ಕ್ಯೂಆರ್ ಕೋಡ್ ಮತ್ತು ನಕಲಿ ಟ್ರಸ್ಟ್ ಖಾತೆಗಳನ್ನು ಸೃಷ್ಟಿಸಿದ್ದರು. ಈ ಮೂಲಕ ಮುಗ್ಧ ಭಕ್ತರಿಂದ ಹಣ ವಸೂಲಿ ಮಾಡಲಾಗುತ್ತಿತ್ತು. ಇದರ ವಿರುದ್ಧ ಅಯೋಧ್ಯೆ ಪೊಲೀಸರು ಮತ್ತು ಸೈಬರ್ ಕ್ರೈಂ ವಿಭಾಗದವರು ಪ್ರಕರಣ ದಾಖಲಿಸಿಕೊಂಡು, ಹಲವು ವಂಚಕರನ್ನು ಈಗಾಗಲೇ ಬಂಧಿಸಿದ್ದಾರೆ. ಶ್ರೀ ರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್ ತನಗೆ ಬಂದಿರುವ ಪ್ರತಿಯೊಂದು ರೂಪಾಯಿ ದೇಣಿಗೆಗೂ ಲೆಕ್ಕಪತ್ರವನ್ನು ಇಟ್ಟಿದ್ದು, ಯಾವುದೇ ಅಧಿಕೃತ ದೇಣಿಗೆ ಲೂಟಿಯಾಗಿಲ್ಲ ಎಂದು ಸ್ಪಷ್ಟಪಡಿಸಿದೆ.

# ಸಾಲ ಪಡೆಯಲು ಬ್ಯಾಂಕ್‌ಗೆ ಅಡಮಾನ ಇಟ್ಟಿದ್ದ ಕೋಟ್ಯಂತರ ರೂ.ಮೌಲ್ಯದ ಚಿನ್ನ ನಾಪತ್ತೆ



ಫಿರೋಜಾಬಾದ್: ಸಾಲ ಪಡೆಯಲು ಭದ್ರತೆಯಾಗಿ ಗ್ರಾಹಕರು ಇಟ್ಟಿದ್ದ ಕೋಟ್ಯಂತರ ಮೌಲ್ಯದ ಚಿನ್ನ ಉತ್ತರ ಪ್ರದೇಶದ ಫಿರೋಜಾಬಾದ್ ಜಿಲ್ಲೆಯ ಬ್ಯಾಂಕ್ ಆಫ್ ಇಂಡಿಯಾ ಶಾಖೆಯ ಲಾಕರ್‌ನಿಂದ ಕಾಣೆಯಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬ್ಯಾಂಕಿನ ಭರೌಲ್ ಶಾಖೆಯ ಲಾಕರ್‌ನಿಂದ ಅಡವಿಟ್ಟ ಚಿನ್ನವನ್ನು ಹೊಂದಿದ್ದ ಒಟ್ಟು 96 ಪ್ಯಾಕೆಟ್‌ಗಳು ಕಾಣೆಯಾಗಿವೆ ಎಂದು ಅಧಿಕಾ-ರಿಗಳು ತಿಳಿಸಿದ್ದಾರೆ.ಬ್ಯಾಂಕಿನ ಆಗ್ರಾ ಪ್ರಾದೇಶಿಕ ಕಚೇರಿಯ ಮುಖ್ಯ ವ್ಯವಸ್ಥಾಪಕ ಆದಿತ್ಯ ಪ್ರತಾಪ್ ಸಿಂಗ್ ಅವರು ತಡರಾತ್ರಿ ಆರೌನ್ ಪೊಲೀಸ್ ಠಾಣೆಯಲ್ಲಿ ಆಗಿನ ಶಾಖೆಯ ವ್ಯವಸ್ಥಾಪಕ ಸೇ-ರಿದಂತೆ ಮೂವರು ಉದ್ಯೋಗಿಗಳ ವಿರುದ್ಧ ಎಫ್‌ಐಆರ್ ದಾಖಲಿಸಿದ್ದಾರೆ.

ಇಟಾವಾ ಜಿಲ್ಲೆಯ ಬಾಸ್ಗಾಂವ್ ಗ್ರಾಮದ ನಿವಾಸಿ ಬ್ಯಾಂಕ್ ಸಿಬ್ಬಂದಿ ಮತ್ತು ಪ್ರಮುಖ ಕಸ್ಟೋಡಿಯನ್ ದಿಲೀಪ್ ಕುಮಾರ್ ಮೇ 27 ರಿಂದ ಮಾಹಿತಿಯಿಲ್ಲದೆ ಗೈರುಹಾಜರಾಗಿದ್ದಾರೆ, ಇದರಿಂದಾಗಿ ಲಾಕರ್ ಸಂಬಂಧಿತ ಕೆಲಸಗಳು ಸ್ಥಗಿತಗೊಂಡಿವೆ ಎಂದು ದೂರಿನಲ್ಲಿ ತಿಳಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಆದಿತ್ಯ ಲಾಂಘೆ ತಿಳಿಸಿದ್ದಾರೆ.

ಬ್ಯಾಂಕ್ ಅವರನ್ನು ಸಂಪರ್ಕಿಸಲು ವಿಫಲವಾದಾಗ, ಅನುಮಾನ ಹುಟ್ಟಿಕೊಂಡಿತು ಮತ್ತು ಈ ವಿಷಯವನ್ನು ಆಗ್ರಾದ ಪ್ರಾದೇಶಿಕ ಕಚೇರಿಗೆ ವರದಿ ಮಾಡಲಾಯಿತು. ಇದರ ನಂತರ, ಜೂನ್ 15 ರಂದು ಫಿರೋರ್ ಶಾಖೆಯ ಹಿರಿಯ ಭದ್ರತಾ ವ್ಯವಸ್ಥಾಪಕ ಅಂಕಿತ್ ಮತ್ತು ಹಿರಿಯ ವ್ಯವಸ್ಥಾಪಕ (ಭದ್ರತೆ) ಸುಶೀಲ್ ಕುಮಾರ್ ಅವರನ್ನು ಭರೌಲ್ ಶಾಖೆಗೆ ಕಳುಹಿಸಲಾಯಿತು.ನಕಲಿ ಕೀಲಿಯನ್ನು ವ್ಯವಸ್ಥೆ ಮಾಡಲಾಗಿದೆ ಮತ್ತು ಬ್ಯಾಂಕಿನ ಸಮಿತಿಯ ವಕೀಲ ಶಿವ ಕುಮಾರ್ ಶರ್ಮಾ ಅವರ ಸಮ್ಮುಖದಲ್ಲಿ ವೀಡಿಯೊ ರೆಕಾರ್ಡಿಂಗ್‌ನೊಂದಿಗೆ ಲಾಕರ್ ಅನ್ನು ತೆರೆಯಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಲಾಕರ್‌ನಿಂದ 96 ಚಿನ್ನದ ಸಾಲ ಪ್ಯಾಕೆಟ್‌ಗಳು ಕಾಣೆಯಾಗಿವೆ ಎಂದು ಅಧಿಕಾ-ರಿಗಳು ಕಂಡುಕೊಂಡರು. ಕಾಣೆಯಾದ ಚಿನ್ನದ ತೂಕ ಅಥವಾ ಮೌಲ್ಯವನ್ನು ಎಫ್‌ಐಆರ್‌ನಲ್ಲಿ ಉಲ್ಲೇಖಿಸಲಾಗಿಲ್ಲ, ಆದರೆ ಅದು ಕೋಟ್ಯಂತರ ರೂಪಾಯಿ ಮೌಲ್ಯದ್ದಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.ಭಾರತೀಯ ನ್ಯಾಯ ಸಂಹಿತಾದ ಸೆಕ್ಷನ್ 316(5) (ಕ್ರಿಮಿನಲ್ ನಂಬಿಕೆ ದ್ರೋಹ) ಅಡಿಯಲ್ಲಿ ಮಾಜಿ ಶಾಖಾ ವ್ಯವಸ್ಥಾಪಕ ಸಂದೀಪ್ ಯಾದವ್, ಸಿಬ್ಬಂದಿ ಅಧಿಕಾರಿ ದಿಲೀಪ್ ಕುಮಾರ್ ಮತ್ತು ಹತ್ರಾಸ್ ಜಿಲ್ಲೆಯ ನಿವಾಸಿ ಕ್ರೆಡಿಟ್ ಅಧಿಕಾರಿ/ಸಿಬ್ಬಂದಿ ಅಧಿಕಾರಿ ನರೇಶ್ ಕುಮಾರ್ ವಿರುದ್ಧ ಎಫ್‌ಐಆರ್ ದಾಖಲಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ತನಿಖೆಯನ್ನು ಪ್ರಾರಂಭಿಸಲಾಗಿದೆ ಮತ್ತು ಕಣ್ಗಾವಲು ಘಟಕ ಸೇರಿದಂತೆ ತಂಡಗಳು ಆರೋಪಿಗಳನ್ನು ಪತ್ತೆಹಚ್ಚಲು ಮತ್ತು ಕಾಣೆಯಾದ ಚಿನ್ನವನ್ನು ಮರುಪಡೆಯಲು ಹಲವಾರು ಸ್ಥಳಗಳಲ್ಲಿ ದಾಳಿ ನಡೆಸಿವೆ ಎಂದು ಅರಾನ್ ಪೊಲೀಸ್ ಠಾಣೆಯ ಉಸ್ತುವಾರಿ ರಿಷಿ ಕುಮಾರ್ ತಿಳಿಸಿದ್ದಾರೆ.

# ಉಜ್ಬೇಕಿಸ್ತಾನ್ ವಿರುದ್ಧ ಕೊಲಂಬಿಯಾಗೆ 3-1 ಜಯ

ಮೆಕ್ಸಿಕೊ ಸಿಟಿ: ಫುಟ್‌ಬಾಲ್ ವಿಶ್ವಕಪ್‌ನ ತಮ್ಮ ಮೊದಲ ಪಂದ್ಯದಲ್ಲಿ ತಾರೆ ಆಟಗಾರ ಲೂಯಿಸ್ ಡಿಯಾಜ್ ಅದ್ಭುತ ಪ್ರದರ್ಶನಿಂದ ಕೊಲಂಬಿಯಾ ತಂಡವನ್ನು ಉಜ್ಬೇಕಿಸ್ತಾನ್ ವಿರುದ್ಧ 3-1 ಗೋಲುಗಳ ಜಯದತ್ತ ಮುನ್ನಡೆಸಿದರು. ಕಳೆದ ರಾತ್ರಿ ನಡೆದ ಪಂದ್ಯದಲ್ಲಿ, ವಿಶ್ವಕಪ್‌ಗೆ ಮೊದಲ ಬಾರಿಗೆ ಕಾಲಿಟ್ಟ ಡೇನಿಯಲ್ ಮುನೋಸ್ 40ನೇ ನಿಮಿಷದಲ್ಲಿ ಲೂಯಿಸ್ ಡಿಯಾಜ್ ನೀಡಿದ ಪಾಸ್ ಅನ್ನು ಗೋಲಾಗಿ ಪರಿವರ್ತಿಸಿ ಕೊಲಂಬಿಯಾಗೆ ಮುನ್ನಡೆ ತಂದರು.

60ನೇ ನಿಮಿಷದಲ್ಲಿ ಫೈಜುಲ್ಲಾಯೆವ್ ಅಬ್ಬೋಸ್ಬೆಕ್ ಗೋಲು ಗಳಿಸುವ ಮೂಲಕ ಉಜ್ಬೇಕಿಸ್ತಾನ್ ಪಂದ್ಯವನ್ನು 1-1ರಿಂದ ಸಮಬಲಗೊಳಿಸಿತು. ವಿಶ್ವಕಪ್‌ನಲ್ಲಿ ಮೊದಲ ಬಾರಿಗೆ ಆಡಿದ ಉಜ್ಬೇಕಿಸ್ತಾನ್ ತಂಡಕ್ಕೆ ಇದು ಐತಿಹಾಸಿಕ ಕ್ಷಣವಾಗಿತ್ತು. ಆದರೆ 65ನೇ ನಿಮಿಷದಲ್ಲಿ ಲೂಯಿಸ್ ಡಿಯಾಜ್ ನಿರ್ಣಾಯಕ ಗೋಲು ದಾಖಲಿಸಿದರು. ಸಮೀಪದಿಂದ ಹೊಡೆದ ಅವರ ಶಾಟ್ ಗೋಲ್‌ಕೀಪರ್ ಉತ್ಕಿರ್ ಯೂಸುಪೋವ್ ಅವರ ಕೈಗಳಿಗೆ ತಾಗಿ ನಿಧಾನವಾಗಿ ಗೋಲುರೇಖೆ ದಾಟಿತು.

ಪಂದ್ಯದ ಹೆಚ್ಚುವರಿ ಸಮಯದಲ್ಲಿ ಜಾಮಿಂಟನ್ ಕ್ಯಾಂಪಾಜ್ ಮತ್ತೊಂದು ಗೋಲು ಸೇರಿಸಿ ಕೊಲಂಬಿಯಾದ ಗೆಲುವನ್ನು ಖಚಿತಪಡಿಸಿದರು. ಮೆಕ್ಸಿಕೊ ನಗರದ ಪ್ರಸಿದ್ಧ ಎಸ್ಟಾಡಿಯೋ ಅಜ್ಟೆಕಾ ಕ್ರೀಡಾಂಗಣದಲ್ಲಿ 80,824 ಪ್ರೇಕ್ಷಕರ ಸಮ್ಮುಖದಲ್ಲಿ ಪಂದ್ಯ ನಡೆಯಿತು. ಹೆಚ್ಚಿನ ಸಂಖ್ಯೆಯ ಕೊಲಂಬಿಯಾ ಅಭಿಮಾನಿಗಳು ತಂಡಕ್ಕೆ ಭರ್ಜರಿ ಬೆಂಬಲ ನೀಡಿದರು. ವಿಶ್ವ ಶ್ರೇಯಾಂಕದಲ್ಲಿ 13ನೇ ಸ್ಥಾನದಲ್ಲಿರುವ ಕೊಲಂಬಿಯಾ, 50ನೇ ಸ್ಥಾನದಲ್ಲಿರುವ ಉಜ್ಬೇಕಿಸ್ತಾನ್ ವಿರುದ್ಧ ಭಾರೀ ನೆಚ್ಚಿನ ತಂಡವಾಗಿತ್ತು. ಈ ಗೆಲುವಿನೊಂದಿಗೆ ಕೊಲಂಬಿಯಾ ಕೆ ಗುಂಪಿನಲ್ಲಿ ಅಗ್ರಸ್ಥಾನಕ್ಕೇರಿದೆ. ಇದಕ್ಕೂ ಮುನ್ನ ಇದೇ ಗುಂಪಿನ ಮತ್ತೊಂದು ಪಂದ್ಯದಲ್ಲಿ ಮತ್ತು ತಂಡಗಳು ಅಚ್ಚರಿಯ 1-1 ಡ್ರಾಗೆ ತೃಪ್ತಿಪಟ್ಟಿದ್ದವು. ಮುಂದಿನ ಪಂದ್ಯದಲ್ಲಿ ಕೊಲಂಬಿಯಾ ತಂಡ ಕಾಂಗೊವನ್ನು ಎದು-



ರಿಸಲಿದ್ದು, ಉಜ್ಬೇಕಿಸ್ತಾನ್ ತಂಡ ನಾಯಕತ್ವದ ಪೋರ್ಚುಗಲ್ ವಿರುದ್ಧ ಸೆಣಸಲಿದೆ. ಕರ್ತಾರ್‌ನಲ್ಲಿ ನಡೆದ 2022ರ ಫೀಫ ವಿಶ್ವಕಪ್‌ನ ಅರ್ಹತೆ ಪಡೆಯಲು ವಿಫಲವಾಗಿದ್ದ ಕೊಲಂಬಿಯಾ, ಈ ಬಾರಿ ವಿಶ್ವಕಪ್‌ಗೆ ಮರಳಿದೆ. ತಂಡದ ಅತ್ಯುತ್ತಮ ಸಾಧನೆ 2014ರ ಬ್ರೆಜಿಲ್ ವಿಶ್ವಕಪ್‌ನಲ್ಲಿ ಕ್ವಾರ್ಟರ್‌ಫೈನಲ್ ಪ್ರವೇಶವಾಗಿತ್ತು.

ದಕ್ಷಿಣ ಅಮೆರಿಕದ ಅರ್ಹತಾ ಸುತ್ತಿನಲ್ಲಿ ಕೊಲಂಬಿಯಾ, ಅರ್ಜೆಂಟೀನಾ ಮತ್ತು ಈಕ್ವೆಡಾರ್ ಮೂರನೇ ಸ್ಥಾನ ಪಡೆದಿತ್ತು. ಉಜ್ಬೇಕಿಸ್ತಾನ್ ತನ್ನ ಏಷ್ಯನ್ ಅರ್ಹತಾ ಗುಂಪಿನಲ್ಲಿ ಗೆದ್ದು ವಿಶ್ವಕಪ್‌ಗೆ ಪ್ರವೇಶಿಸಿತ್ತು.

# ಎಫ್‌ಐಎಚ್ ಪ್ರೊಹಾಕಿ ಲೀಗ್ ಜರ್ಮನಿ ವಿರುದ್ಧ 3-1 ಜಯ ಸಾಧಿಸಿದ ಭಾರತ

ರೋಟರ್‌ಡ್ಯಾಮ್: ಅನುಭವಿ ಮಧ್ಯಮ ಆಟಗಾರ ಮನ್‌ಪ್ರೀತ್ ಸಿಂಗ್ ತಮ 413ನೇ ಅಂತರರಾಷ್ಟ್ರೀಯ ಪಂದ್ಯವನ್ನಾಡುವ ಮೂಲಕ ಭಾರತೀಯ ಹಾಕಿ ಇತಿಹಾಸದಲ್ಲಿ ಅತಿಹೆಚ್ಚು ಪಂದ್ಯಗಳನ್ನು ಆಡಿದ ಆಟಗಾರ ಎಂಬ ದಾಖಲೆಯನ್ನು ನಿರ್ಮಿಸಿದರು. ಈ ವಿಶೇಷ ಸಂದರ್ಭದಲ್ಲಿ ಭಾರತ ತಂಡ ಎಫ್‌ಐಎಚ್ ಹಾಕಿ ಪ್ರೊ ಲೀಗ್‌ನ ಎರಡನೇ ಪಂದ್ಯದಲ್ಲಿ ಜರ್ಮನಿಯನ್ನು 3-1 ಗೋಲುಗಳಿಂದ ಮಣಿಸಿ ಭರ್ಜರಿ ಗೆಲುವು ಸಾಧಿಸಿತು.

ಭಾರತದ ಪರ ಮನ್‌ದೀಪ್ ಸಿಂಗ್ (7ನೇ ನಿಮಿಷ), ಶಿಲಾನಂದ್ ಲಕ್ರಾ (13ನೇ ನಿಮಿಷ) ಮತ್ತು ನೀಲಕಂಠ ಶರ್ಮಾ (35ನೇ ನಿಮಿಷ) ತಲಾ ಒಂದು ಗೋಲು ಗಳಿಸಿದರು. ಜರ್ಮನಿಯ ಪರ ರಫಾಯೆಲ್ ಹಾರ್ಟ್‌ಕೋಪ್ (45ನೇ ನಿಮಿಷ) ಏಕೈಕ ಗೋಲು ದಾಖಲಿಸಿದರು. ಭಾರತದ ಮಧ್ಯಮ ಆಟಗಾರ ಹಾರ್ದಿಕ್ ಸಿಂಗ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಪಂದ್ಯದ ಆರಂಭದಿಂದಲೇ ಚೆಂಡಿನ ಮೇಲೆ ನಿಯಂತ್ರಣ ಸಾಧಿಸಿದ ಭಾರತ 7ನೇ




ನಿಮಿಷದಲ್ಲಿ ಮೊದಲ ಗೋಲು ಗಳಿಸಿತು. ಗೋಲುಮುಂಭಾಗದಲ್ಲಿ ಮನ್‌ದೀಪ್ ಸಿಂಗ್ ತೋರಿದ ಚಾಣಾಕ್ಷ ಆಟ ತಂಡಕ್ಕೆ 1-0 ಮುನ್ನಡೆ ತಂದುಕೊಟ್ಟಿತು.

ಮೊದಲ ಕ್ವಾರ್ಟರ್ ಅಂತ್ಯಗೊಳ್ಳುವ ಮುನ್ನವೇ ಶಿಲಾನಂದ್ ಲಕ್ರಾ ಜರ್ಮನಿಯ ಗೋಲ್‌ಕೀಪರ್ ಅಲೆಕ್ಸಾಂಡರ್ ಸ್ಟ್ವಾಡ್ಲರ್ ಅವರನ್ನು ಮಣಿಸಿ ಭಾರತವನ್ನು 2-0 ಅಂತರದಲ್ಲಿ ಮುನ್ನಡೆಸಿದರು.

ಎರಡನೇ ಕ್ವಾರ್ಟರ್‌ನಲ್ಲಿ ಜರ್ಮನಿ ಆಕ್ರಮಣಕಾರಿ ಆಟ ಪ್ರದರ್ಶಿಸಿ ಭಾರತದ ಅರ್ಧಭಾಗದಲ್ಲಿ ಒತ್ತಡ ಹೇರಲು ಪ್ರಯತ್ನಿಸಿತು. ಈ ವೇಳೆ ಎರಡು ಪೆನಾಲ್ಟಿ ಕಾರ್ನರ್ ಅವಕಾಶಗಳು ಲಭಿಸಿದರೂ, ಮೊದಲ ಪ್ರಯತ್ನವನ್ನು ಅಮಿತ್ ರೋಹಿದಾಸ್ ತಡೆದರೆ, ಎರಡನೇ ಪ್ರಯತ್ನವನ್ನು ಗೋಲ್‌ಕೀಪರ್ ಮೋಹಿತ್ ಅದ್ಭುತವಾಗಿ ವಿಫಲಗೊಳಿಸಿದರು. ಮೂರನೇ ಕ್ವಾರ್ಟರ್‌ನಲ್ಲಿ ನೀಲಕಂಠ ಶರ್ಮಾ ಏಕಾಂಗಿಯಾಗಿ ಜರ್ಮನಿಯ ರಕ್ಷಣಾ ಆಟಗಾರರನ್ನು ಮೀರಿಸಿ ಚೆಂಡನ್ನು ಗೋಲುಪೆಟ್ಟಿಗೆಯೊಳಗೆ ಸೇರಿಸುವ ಮೂಲಕ ಭಾರತದ ಮುನ್ನಡೆಯನ್ನು 3-0ಕ್ಕೆ ಹೆಚ್ಚಿಸಿದರು. ಮೂರನೇ ಕ್ವಾರ್ಟರ್ ಮುಗಿಯಲು ಕೇವಲ 20 ಸೆಕೆಂಡುಗಳು ಬಾಕಿ ಇರುವಾಗ ರಫಾಯೆಲ್ ಹಾರ್ಟ್‌ಕೋಪ್ ಜರ್ಮನಿಯ ಮೊದಲ ಗೋಲು ದಾಖಲಿಸಿ ಅಂತರವನ್ನು 3-1ಕ್ಕೆ ಇಳಿಸಿದರು. ಕೊನೆಯ ಕ್ವಾರ್ಟರ್‌ನಲ್ಲಿ ಜರ್ಮನಿ ತೀವ್ರ ಹೋರಾಟ ನಡೆಸಿದರೂ ಭಾರತದ ರಕ್ಷಣಾ ಪಡೆ ಅತ್ಯಂತ ಶಿಸ್ತಿನ ಆಟ ಪ್ರದರ್ಶಿಸಿ ಮತ್ತೊಂದು ಗೋಲು ಅವಕಾಶ ನೀಡಲಿಲ್ಲ. ಪಂದ್ಯ ಮುಗಿಯಲು 90 ಸೆಕೆಂಡುಗಳು ಬಾಕಿ ಇರುವಾಗ ಜರ್ಮನಿ ಅಂತಿಮ ದಾಳಿ ನಡೆಸಿದರೂ ಭಾರತೀಯ ರಕ್ಷಣಾ ಆಟಗಾರರು ದೃಢವಾಗಿ ಎದುರಿಸಿ ಜಯವನ್ನು ಖಚಿತಪಡಿಸಿದರು.

# ಉದ್ಯಮಿ ಅಪಹರಿಸಿ 1.9 ಕೋಟಿ ಹಣ ದರೋಡೆ : ಆರೋಪಿಗಳ ಪತ್ತೆಗೆ ಎರಡು ತಂಡ ರಚನೆ

ಬೆಂಗಳೂರು: ಉದ್ಯಮಿಯೊಬ್ಬರನ್ನು ಅಪಹರಿಸಿ 1.9 ಕೋಟಿ ಹಣ ದರೋಡೆ ಮಾಡಿ ಪರಾರಿಯಾಗಿರುವ ಏಳು ಮಂದಿ ಆರೋಪಿಗಳಿಗಾಗಿ ಮಾದನಾಯಕನಹಳ್ಳಿ ಠಾಣೆ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಪರಿಚಯಸ್ಥರೇ ಈ ದರೋಡೆ ಮಾಡಿರುವ ಶಂಕೆ ವ್ಯಕ್ತವಾಗಿದ್ದು, ಈ ಹಿನ್ನಲೆಯಲ್ಲಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಆರೋಪಿಗಳ ಬಂಧನಕ್ಕೆ ಎರಡು ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಈ ತಂಡಗಳು ಈಗಾಗಲೇ ಕಾರ್ಯಾಚರಣೆ ಕೈಗೊಂಡಿವೆ.

ಮುನಿಸ್ವಾಮಿರೆಡ್ಡಿ ಲೇಔಟ್ ನಿವಾಸಿಯಾಗಿರುವ ಉದ್ಯಮಿ ಶಿವಶಂಕರ್ ಅವರು ತಮ ಸ್ನೇಹಿತ ಚೇತನ್ ಜೊತೆ ಕಾರಿನಲ್ಲಿ ಹೋಗುತ್ತಿದ್ದಾಗ ಮಾರ್ಗಮಧ್ಯೆ ಕುದುರೆಗೆರೆ ಗಣೇಶ ದೇವಸ್ಥಾನದ ಬಳಿ ಕಾರನ್ನು ಅಡ್ಡಗಟ್ಟಿದ ದರೋಡೆಕೋರರು ಏಕಾಏಕಿ ಅವರ ಮೇಲೆ ಬಿಯರ್ ಬಾಟಲಿ ಹಾಗೂ ಚಾಕುವಿನಿಂದ ಹಲ್ಲೆ ನಡೆಸಿ ಅವರಿಬ್ಬರನ್ನು ಅಪಹ-ರಿಸಿದ್ದಾರೆ. ಕಾರಿನಲ್ಲಿದ್ದ 74 ಲಕ್ಷ ಹಣ ದೋಚಿದಲ್ಲದೇ ಅವರ ಮನೆಯಲ್ಲಿಟ್ಟಿದ್ದ 35 ಲಕ್ಷ ಹಣವನ್ನೂ ತರಿಸಿಕೊಂಡು



ಒಟ್ಟು 1.9 ಕೋಟಿ ಹಣದೊಂದಿಗೆ ದರೋಡೆಕೋರರು ಪರಾರಿಯಾಗಿದ್ದಾರೆ.

ಇವರ ಬಳಿ ಹಣವಿರುವುದು ಗೊತ್ತಿದ್ದವರೇ ಸಂಚು ರೂಪಿಸಿ ದರೋಡೆ ನಡೆಸಿರುವ ಬಗ್ಗೆ ಅನುಮಾನ ವ್ಯಕ್ತವಾಗಿದ್ದು, ಎಲ್ಲಾ ಆಯಾಮಗಳಲ್ಲೂ ಪೊಲೀಸರು ಮಾಹಿತಿಗಳನ್ನು ಕಲೆಹಾಕುತ್ತಿದ್ದಾರೆ. ಉದ್ಯಮಿ ಶಿವಶಂಕರ್ ಅವರು ಸ್ನೇಹಿತರೊಂದಿಗೆ ಸೇರಿಕೊಂಡು ಯಶವಂತಪುರದಲ್ಲಿ ಸೆಕ್ಯೂರಿಟಿ ಏಜೆನ್ಸಿ ನಡೆಸುತ್ತಿದ್ದರು. ತದನಂತರ ರೈಸ್ ಫುಲ್ಲಿಂಗ್‌ನಲ್ಲಿ ಹಣ ಕಳೆದುಕೊಂಡಿದ್ದರು. ಬಳಿಕ ಆ ಹಣ ಗಳಿಸಲು ಸ್ನೇಹಿತರ ಜೊತೆ ಸೇರಿ ರೈಸ್ ಫುಲ್ಲಿಂಗ್ ನಡೆಸುತ್ತಿದ್ದರು. ಈ ಸಂಬಂಧ ಶಿವಶಂಕರ್ ವಿರುದ್ಧವೇ ಪ್ರಕರಣ ದಾಖಲಾಗಿತ್ತು. ಇದೀಗ ಹಣ ದರೋಡೆ ದೂರಿನ ಬಗ್ಗೆಯೂ ಪೊಲೀಸರು ಪರಿಶೀಲಿಸುತ್ತಿದ್ದಾರೆ.

# ಕೊಪ್ಪಳ ನಗರಸಭೆ : ಹಿಂದುಳಿದ ವರ್ಗದವರಿಗೆ ಶಸ್ತ್ರ ಚಿಕಿತ್ಸೆಗೆ ಸಹಾಯಧನಕ್ಕೆ ಅರ್ಜಿ ಆಹ್ವಾನ

ಕೊಪ್ಪಳ: ಕೊಪ್ಪಳ ನಗರಸಭೆ ವತಿಯಿಂದ ಹಿಂದುಳಿದ ವರ್ಗದ ಜನಾಂಗದ ಸಾರ್ವಜನಿಕರಿಗೆ ಶಸ್ತ್ರ ಚಿಕಿತ್ಸೆಗೆ ಸಹಾಯಧನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

2025-26ನೇ ಸಾಲಿನ ಶೇ.24.10ರ ಯೋಜನೆಯಡಿ ಈ ಸೌಲಭ್ಯ ಕಲ್ಪಿಸಲಾಗಿದ್ದು, ಜಿಲ್ಲಾಧಿಕಾರಿಗಳ ಆದೇಶದಂತೆ ಕೊಪ್ಪಳ ನಗರಸಭೆ ವ್ಯಾಪ್ತಿಯ ಅರ್ಹ ಫಲಾನುಭವಿಗಳಿಗೆ ಶೇ.40ರಷ್ಟು ವೈದ್ಯಕೀಯ ಸಹಾಯಧನ ಮಂಜೂರು ಮಾಡಲು ಉದ್ದೇಶಿಸಲಾಗಿದೆ. ಕೊಪ್ಪಳ ನಗರಸಭೆ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಹಿಂದುಳಿದ ವರ್ಗಗದ ಜನಾಂಗಕ್ಕೆ ಸೇರಿದ ಆಸಕ್ತರು ಜೂನ್ 30 ರೊಳಗಾಗಿ ಕೊಪ್ಪಳ ನಗರಸಭೆ ಕಾರ್ಯಾಲಯದಲ್ಲಿ ಅರ್ಜಿಯನ್ನು ಸಲ್ಲಿಸಬೇಕು. ಅರ್ಜಿ ಸಲ್ಲಿಸುವವರು ಕೊಪ್ಪಳ ನಗರದ ಕಾಯಂ ನಿವಾಸಿಯಾಗಿರಬೇಕು. ಜೊತೆಗೆ ಪ್ರಸ್ತುತ ಸಾಲಿನ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಶಸ್ತ್ರ ಚಿಕಿತ್ಸೆಗೆ ಸಂಬಂಧಿಸಿದ ಅಧಿಕೃತ ವೈದ್ಯಕೀಯ ಪ್ರಮಾಣ ಪತ್ರ, ಆಸ್ಪತ್ರೆಯ ಖರ್ಚು ವೆಚ್ಚದ ಬಿಲ್ಲುಗಳು, ಎರಡು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳು, ಆದ-ಾರ್ ಕಾರ್ಡ್ ಅಥವಾ ರೇಷನ್ ಕಾರ್ಡ್ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ನಿಗದಿತ ಅವಧಿ ನಂತರ ಸಲ್ಲಿಕೆಯಾಗುವ ಹಾಗೂ ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ಯಾವುದೇ ಕಾರಣಕ್ಕೂ ಪರಿಗಣಿಸಲಾಗುವುದಿಲ್ಲ ಎಂದು ಕೊಪ್ಪಳ ನಗರಸಭೆಯ ಪೌರಾಯುಕ್ತರಾದ ಮಂಜುನಾಥ ಗುಂಡೂರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅನಿತ್ಯ ದೇಹ ನಿತ್ಯ ಆತ್ಮ ಸಾವಿನ ಸತ್ಯ ಅರಿಯುವ ಆಧ್ಯಾತ್ಮದ ದೀಪ



ಲೋಕದಲ್ಲಿ ನಿರಂತರ ಸಾವು–ನೋವು, ದುಃಖ ಕಣ್ಣಾರೆ ಕಾಣುತ್ತಿದ್ದರೂ ದೇಹ ಅನಿತ್ಯವೆಂಬುದು ಅರ್ಥವಾಗುವುದಿಲ್ಲ.ಸಂಸಾರ ಬಂಧದಿಂದ ಪಾರಾಗಬೇಕೆಂದರೆ ಆಧ್ಯಾತ್ಮ ದ ದೀಪ ಮನದಿ ಬೆಳಗಬೇಕು..... ನಾವು ಜೀವದ ಸುತ್ತ ಹೊದ್ದಿರುವ ನಮ್ಮ ದೇಹ ಎಂಬ ಚಾದರ ಸಾವಿನ ನಂತರ ನಮ್ಮದಾಗಿ ಉಳಿಯುವುದಿಲ್ಲ. ಹಾಗಾಗಿಯೇ ಸಾವು ನಮಗೆ ಅನಿವಾರ್ಯವಾದರೂ ಅಪ್ರಿಯ. ಪುರಾಣಗಳಲ್ಲಿ ಬರುವ ಕೆಲವು ಘಟನೆಗಳು ಈ ಅನಿವಾರ್ಯವಾದ ಸಾವನ್ನು ಹೇಗೆ ಸ್ವೀಕರಿಸಬೇಕು ಎಂಬುದರ ಬಗ್ಗೆ ಬೆಳಕು ಚೆಲ್ಲುತ್ತವೆ.

ಬಲರಾಮ, ಕೃಷ್ಣರ ಗುರು ಸಾಂದೀಪನಿ ಮುನಿಗಳು. ಶಿಷ್ಯರ ಶಿಕ್ಷಣ ಮುಗಿದಾಗ ಗುರುದಕ್ಷಿಣೆಯಾಗಿ ಪ್ರಭಾಸ ಕ್ಷೇತ್ರದಲ್ಲಿ ಮುಳುಗಿ ಕಳೆದು ಹೋದ ತನ್ನ ಮಗನನ್ನು ಬಯಸಿದರು. ಸಮುದ್ರ ತೀರಕ್ಕೆ ಬಂದು ಅವನಿಗಾಗಿ ಅರಸಿದ ಕೃಷ್ಣ, ಸಮುದ್ರದೇವನ ಹೇಳಿಕೆಯಂತೆ ಸಮುದ್ರದಾಳದಲ್ಲಿ ಶಂಖರೂಪಿಯಾಗಿ ಅಡಗಿದ್ದ 'ಪಂಚಜನ' ಎಂಬ ರಕ್ಕಸನನ್ನು ಕೊಂದು ಅವನ ಹೊಟ್ಟೆಯಲ್ಲಿ ಸಿಕ್ಕಿದ ಅಮೂಲ್ಯ ಶಂಖಕ್ಕೆ 'ಪಾಂಚಜನ್ಯ' ಎಂದು ಹೆಸರಿಟ್ಟು ತನ್ನದಾಗಿಸಿಕೊಳ್ಳುತ್ತಾನೆ. ಆದರೆ ಅವನ ಆಹಾರವಾಗಿ ಸಿಕ್ಕಿ ಈಗಾಗಲೇ ಮೃತ್ಯುಲೋಕಕ್ಕೆ ಸೇರಿರುವ ಗುರುಪುತ್ರನನ್ನು ಅರಸುತ್ತಾ ಯಮನ ಲೋಕಕ್ಕೆ ಹೋಗುತ್ತಾನೆ. ಅಲ್ಲಿ ಯಮಧರ್ಮನನ್ನು ಭೇಟಿಯಾಗಿ, ಗುರುಪುತ್ರನನ್ನು ಮರಳಿ ಭೂಲೋಕಕ್ಕೆ ಒಯ್ಯುವ ಇಚ್ಛೆಯನ್ನು ವ್ಯಕ್ತಪಡಿಸುತ್ತಾನೆ. ಅದಕ್ಕೆ ಯಮನು 'ಒಮ್ಮೆ ಸತ್ತವರನ್ನು ಮರಳಿ ಪಡೆಯುವುದುಂಟೇ? ಲೋಕನಾಥನಾದ ನೀನೇ ಈ ನಿಯಮವನ್ನು ಮೀರಬಹುದೇ?' ಎಂದು ಪ್ರಶ್ನಿಸುತ್ತಾನೆ.

ಉತ್ತರವಾಗಿ ಕೃಷ್ಣನು 'ಜೀವನದ ಬಗ್ಗೆ, ಜೀವಿಗಳ ಸಾರ್ಥಕತೆಯ ಬಗ್ಗೆ ಇನ್ನೊಬ್ಬರಿಗೆ ತಿಳಿಹೇಳುವ ನನ್ನ ಗುರುವು ಈಗ ತನಗೆ ತಾನೇ ಮಗನ ಮೇಲಿನ ಮೋಹಪಾಶದಲ್ಲಿ ಬಂಧಿಯಾಗಿದ್ದಾನೆ. ಅವನ ಕಣ್ಣುಗಳನ್ನು ತೆರೆಯಿಸಲು ಬೇರೆ ದಾರಿ ಇಲ್ಲ. ಆದ್ದರಿಂದ ಆತ್ಮರೂಪಿ ಗುರುಪುತ್ರನನ್ನು ನನ್ನೊಂದಿಗೆ ಕಳುಹಿಸು' ಎಂದು ಕೇಳಿದಾಗ ಯಮನು ಒಪ್ಪಿ ಕಳುಹಿಸುತ್ತಾನೆ.
ಕೃಷ್ಣನು, ತಮ್ಮ ಪುತ್ರನನ್ನು ಕರೆತಂದದ್ದನ್ನು ನೋಡಿ ಸಾಂದೀಪನಿ ಮಹರ್ಷಿ ಮತ್ತು ಅವರ ಮಡದಿ ಬೆರಗಾಗುತ್ತಾರೆ. ತನ್ನ ಪುತ್ರನನ್ನು 'ಮಗನೇ' ಎಂದು ಬರಸೆಳೆಯಲು ತಾಯಿ ಮುಂದಾಗುತ್ತಾಳೆ. ಆದರೆ ಆತ್ಮರೂಪಿ ಗುರುಪುತ್ರನು ಇವರನ್ನು ಅಪರಿಚಿತರಂತೆ ಕಾಣುತ್ತಾನೆ. ಆಗ ಕೃಷ್ಣನು ಅವರನ್ನು ಪರಿಚಯಿಸುತ್ತಾ 'ಇವರೇ ನಿನ್ನ ತಂದೆ, ತಾಯಿ' ಎನ್ನುತ್ತಾನೆ. ಅದಕ್ಕುತ್ತರವಾಗಿ ಆ ಆತ್ಮವು ದಂಪತಿಗಳಿಗೆ ಕೈ ಮುಗಿದು 'ನೀವು ನನ್ನ ಯಾವ ಜನ್ಮದ ತಂದೆ ತಾಯಿಗಳೆಂದು ನನಗೆ ತಿಳಿದಿಲ್ಲ. ಯಾಕೆಂದರೆ 'ನಾನು' ಎನ್ನುವುದು ಏನೆಂದು ನನಗೆ ಗೊತ್ತಿಲ್ಲ, ಕ್ಷಮಿಸಿ' ಎಂದಿತು.

ಇದನ್ನು ಕೇಳಿದ ಗುರು ಕೃಷ್ಣನಲ್ಲಿ.... 'ಸಾವಿನ ನಂತರ ಏನೆಂಬುದು ಸತ್ತವರಿಗೂ ಗೊತ್ತಿಲ್ಲ. ಇದ್ದವರಿಗೂ ಗೊತ್ತಿಲ್ಲ. ಇನ್ನು ಮಗನ ವ್ಯಾಮೋಹದಲ್ಲಿ ಇದ್ದೂ ಸತ್ತಂತೆ ಬದುಕುವ ನಮಗೆ ಹೇಗೆ ಅರಿವಿಗೆ ಬಂದೀತು? ಇಲ್ಲಿಯವರೆಗೆ ಯಾವ ದೇಹವನ್ನು ಮನದಲ್ಲಿ ಇಟ್ಟುಕೊಂಡು ಮಗನೆಂದು ಗುರುತಿಸುತ್ತಿದ್ದೆವೋ ಆ ದೇಹ ಅಳಿದ ಮೇಲೆ ಆತ್ಮಕ್ಕೆ ನಮ್ಮ ಜೊತೆ ಸಂಬಂಧ ಇಲ್ಲ ಎಂಬ ಸತ್ಯವನ್ನು ನೀನು ನಮಗೆ ಪರಿಚಯಿಸಿದೆ. ಈ ಅರಿವೇ ನೀನು ನಮಗಿತ್ತ ಗುರುದಕ್ಷಿಣೆ' ಎಂದು ಹೇಳಿದರು.

ವೇದಾಂತ ಬಿಟ್ಟು ಲೋಕದ ದೃಷ್ಟಿಯಲ್ಲಿ ವಿಚಾರ ಮಾಡಿದರೆ, ಆತ್ಮ ದೇಹದ ಮೂಲಕ ವ್ಯಕ್ತವಾಗುತ್ತದೆ ಹಾಗು ಸಾವಿನ ಮೂಲಕ ಅವ್ಯಕ್ತವಾಗುತ್ತದೆ. ಹುಟ್ಟು–ಸಾವನ್ನು ಮೀರಿ ನಿಲ್ಲುವುದು ಎಂದೂ ಸಾಧ್ಯವಿಲ್ಲ. ಆದ್ದರಿಂದ ಸಾವಿನ ಬಗ್ಗೆ ದುಃಖ ಪಡುವ ಅಗತ್ಯವಿಲ್ಲ. ಬದುಕಿರುವ ತನಕ ನಮ್ಮ ಮುಂದಿರುವ ಕರ್ತವ್ಯವನ್ನು ಮಾಡುತ್ತಿರುವುದು ಜೀವನ. ಸಾಮಾನ್ಯವಾಗಿ ಲೋಕದ ಜನ ಹಗಲನ್ನು ತಮ್ಮ ಕುಟುಂಬ ಪೋಷಣೆಯ ಚಿಂತೆಯಲ್ಲಿ ಹಾಗೂ ಇರುಳನ್ನು ವಿಷಯ ಸುಖ, ನಿದ್ರೆಯಲ್ಲಿ ಕಳೆಯುತ್ತಾರೆ.
ಆತ್ಮಜ್ಞಾನದಲ್ಲಿ ಬಹುಪಾಲು ಜನರಿಗೆ ಆಸಕ್ತಿ ಇರುವುದಿಲ್ಲ. ಲೋಕದಲ್ಲಿ ನಿರಂತರ ಸಾವನ್ನು ಕಣ್ಣಾರೆ ಕಾಣುತ್ತಿದ್ದರೂ ದೇಹ ಅನಿತ್ಯವೆಂಬುದು ಅರ್ಥವಾಗುವುದಿಲ್ಲ.ಸಂಸಾರ ಬಂಧದಿಂದ ಪಾರಾಗಬೇಕೆಂದರೆ ಆಧ್ಯಾತ್ಮ ದ ದೀಪ ಮನದಿ ಬೆಳಗಬೇಕು.....



ಪ್ರಶಾಂತಭಟ್ ಕೋಟೇಶ್ವರ

# ಗೃಹ ತ್ಯಾಗ..ಒಂದು ಹೊಸ ಮುನ್ನುಡಿ



ನಸುಕಿನ 5:ರ ಸಮಯ. ಮಾಡಿದ ಎಲ್ಲಾ ಅಡುಗೆಗಳನ್ನು ಒಂದೆಡೆ ಜೋಡಿಸಿದ ಸುಮಾಳ ಬೆನ್ನು ನೋವಿನಿಂದ ಮುಲುಗುಟ್ಟುತ್ತಿದ್ದರೆ ದೇಹ ಒಲೆಯ ಝಳದ ಜೊತೆಗೆ ಜ್ವರದ ತಾಪದಿಂದ ಕಾಯುತ್ತಿತ್ತು. ಅಡುಗೆ ಮನೆಯ ಬಾಗಿಲಲ್ಲಿ ಬಂದು ನಿಂತ ಅತ್ತೆ ರಮಾ ಬಾಯಿ ಎಲ್ಲ ಕೆಲಸ ಮುಗಿಯಿತೆ? ಎಂದು ಬಿಗುಮಾನದಿಂದ ಕೇಳಿದರು. ತಲೆಯೆತ್ತದೆ ಗೋಣಾಡಿಸಿದ ಸೊಸೆ ಸುಮಳನ್ನು ನೋಡಿ ಅವರ ಅತ್ತೆತನದ ಹಮ್ಮು ಸಂತೃಪ್ತಿಗೊಂಡಿತು.

ತುಸು ದರ್ಪದ ಧ್ವನಿಯನ್ನು ಹೆಚ್ಚಿಸಿ ಬರಿ ಇಡ್ಲಿ ವಡೆ ಚಟ್ನಿ ಸಾಂಬಾರ್ ಸಾಲುವುದಿಲ್ಲ ಒಂದಷ್ಟು ಕೇಸರಿಬಾತ್ ಹಾಗೂ ಉಪ್ಪಿಟ್ಟು ಕೂಡ ಮಾಡಿಬಿಡು ಸುಮಾ ಎಂದು ಹೇಳಿದರು. ಈಗಾಗಲೇ ದೇಹವೆಲ್ಲಾ ಬಿಸಿಯಾಗಿ ಬೆನ್ನು ಹೊಡೆತದಿಂದ ಒದ್ದಾಡುತ್ತಿದ್ದ ಸುಮಾಳ ಮುಖದಲ್ಲಿ ವ್ಯಂಗ್ಯದ ನಗು ಮೂಡಿತು. ಮನದಲ್ಲಿ ನಿಶ್ಚಯ ಮಡುಗಟ್ಟಿತು.
ಆಯ್ತು ಎಂದು ತಲೆ ಆಡಿಸಿದ ಆಕೆ ಡಬ್ಬದಿಂದ ರವೆಯನ್ನು ತೆಗೆದು ಹುರಿಯಲು ಆರಂಭಿಸಿದಳು. ರವೆಯ ಕಣಗಳು ನಿಧಾನವಾದ ಉರಿಗೆ ಹದವಾಗಿ ಹುರಿಯಲ್ಪಟ್ಟು ಘಮ್ಮನೆಯ ಸುವಾಸನೆಯನ್ನು ಹೊರಡಿಸಿದ್ದರೆ ಅಸಹನೆಯನ್ನು ಮೂಡಿಸುವ ಕಳೆದ ನಾಲ್ಕು ವರ್ಷಗಳ ಆಕೆಯ ವೈವಾಹಿಕ ಬದುಕಿನ ಪುಟಗಳು ಒಂದೊಂದಾಗಿ ಮೊದಲಿನಿಂದ ತೆರೆಯಲು ಆರಂಭಿಸಿದ್ದವು. ಜಿಲ್ಲಾ ಕೇಂದ್ರವೊಂದರ ತ್ರೀ ಸ್ಟಾರ್ ಹೋಟೆಲ್ ನಲ್ಲಿ ಮುಖ್ಯ ಅಡುಗೆ ಸಹಾಯಕಿಯಾಗಿ ಕಾರ್ಯನಿರ್ವಹಿಸುತ್ತಿದ್ದ ಸುಮಳನ್ನು ನೋಡಲು ಬಂದ ಸುದೀಪ್ ಗೆ ಮೆಚ್ಚುಗೆಯಾದದ್ದು ಆಕೆಯ ಸ್ನಿಗ್ಧ ಸೌಂದರ್ಯವಾದರೆ ಅತ್ಯಂತ ಸೌಮ್ಯ ಮುಖಭಾವವನ್ನು ಕಂಡ ಸುದೀಪನ ತಾಯಿ ತನ್ನ ತಾಳಕ್ಕೆ ತಕ್ಕಂತೆ ಯುವತಿಯನ್ನು ಕುಣಿಸಬಹುದು ಎಂಬ ಭಾವ ಒಪ್ಪಿಗೆ ಸೂಸಲು ಕಾರಣವಾಗಿತ್ತು. ತಾಯಿ ಮತ್ತು ಮಗನ ಮಾತಿಗೆ ಎದುರಾಡದ ತಂದೆ ತಮ್ಮ ಸಮ್ಮತಿಯನ್ನು ಸೂಚಿಸಿದರು.

ಇರುವುದರಲ್ಲಿಯೇ ಚೆನ್ನಾಗಿ ಮದುವೆ ಮಾಡಿಕೊಟ್ಟ ಸುಮಳ ಪಾಲಕರು ತಮ್ಮ ತಲೆಯ ಮೇಲಿನ ಹೊರೆ ಇಳಿದ ಭಾವವನ್ನು ಅನುಭವಿಸಿದರು. ತಾಯಿಯ ತವರುಮನೆಯಿಂದ ಬಂದು ಒಂದು ತುಂಬಿಟ್ಟ ಸೇರನ್ನು ಒದ್ದು ಬಲಗಾಲಿಟ್ಟು ಮನೆಯನ್ನು ಪ್ರವೇಶಿಸಿದ ಸೊಸೆಯ ಕೈಯಿಂದ ಕುಟುಂಬಕ್ಕೆ ಸಂಬಂಧಿಸಿದ ತಿಜೋರಿಯಲ್ಲಿ ಸುಮಾಳ ಆಸ್ತಿ ಪತ್ರ ಹಾಗೂ ಒಡವೆಗಳನ್ನು ಇಸಿದುಕೊಂಡು ಆಕೆಯ ಅತ್ತೆ ಭದ್ರಪಡಿಸಿದರು. ಮಧುಚಂದ್ರದ ಅವಧಿ ಮುಗಿಯುವ ಮೊದಲೇ ಸುಮಾಳ ಹರಿವಿಗೆ ಬಂದದ್ದು ಆಕೆಯ ಪತಿ ತನ್ನ ತಾಯಿಯ ಮಾತನ್ನು ತೆಗೆದುಹಾಕುವುದಿಲ್ಲ ಎಂಬುದರ ಅರಿವಾಗಿತ್ತು. ಮಾವ ಕೂಡ ಕೋಲೆ ಬಸವನಂತೆ ತಲೆಯಾಡಿಸುವುದು ಆಕೆಯ ಅರಿವಿಗೆ ಬಂದಿತ್ತು. ಸ್ವಭಾವತಃ ಮೆದುವಾಗಿದ್ದ ಸುಮಾ ತನ್ನ ಮನೆಯ ಪರಿಸ್ಥಿತಿಗಿಂತ ಅಷ್ಟೇನೂ ಭಿನ್ನವಾಗಿಲ್ಲದ ಗಂಡನ ಮನೆಗೆ ಸಹಜವಾಗಿಯೇ ಒಗ್ಗಿಕೊಂಡಳು. ಆದರೆ ದಿನ ದಿನಕ್ಕೆ ಅತ್ತೆಯ ಕಠಿಣತೆ ಹೆಚ್ಚಾಗುತ್ತಾ ಹೋಯಿತು ಹಾಗೂ ಗಂಡ ತಾಯಿಯೊಂದಿಗೆ ಹೊಂದಿಕೊಂಡು ಹೋಗು, ತಾಯಿ ಹೇಳಿದಂತೆ ಕೇಳು,ಅಮ್ಮನ ಮನಸ್ಸಿಗೆ ಬೇಸರವಾಗದಂತೆ ನೋಡಿಕೋ ಎಂದು ಹೇಳುವುದನ್ನು ಕೇಳಿ ಆಕೆಗೆ ಬೇಸರವಾಗತೊಡಗಿತು. ಅದರಲ್ಲೂ ಅತ್ತೆ ತನ್ನನ್ನು ಮನೆಯಲ್ಲಿ ಎಲ್ಲರ ಸೇವೆ ಮಾಡುವ ಸೇವಕಿ ಎಂಬಂತೆ ಬಿಂಬಿಸತೊಡಗಿದಾಗ ಆಕೆಯ ಬೇಸರ ನೋವಿಗೆ ಎಡೆ ಮಾಡಿಕೊಟ್ಟಿತು. ದಿನಗಳೆದಂತೆ ಅತ್ತೆಯ ದರ್ಪ, ಮಾವನ ಕಾಠಿಣ್ಯ ಹಾಗೂ ಗಂಡನ ನಿಷ್ಕ್ರಿಯತೆ ಆಕೆಯಲ್ಲಿ ಒಂದು ಬಗೆಯ ಬೇಸರವನ್ನು ಉಂಟು ಮಾಡಿ, ಆಕೆ ಬದುಕಿನಲ್ಲಿ ಆಸಕ್ತಿಯನ್ನೇ ಕಳೆದುಕೊಂಡಳು. ಇದರ ಜೊತೆಗೆ ಮಕ್ಕಳಾಗದೇ ಇರುವುದು ಆಕೆಯ ಬೇಸರವನ್ನು ಮತ್ತಷ್ಟು ಹೆಚ್ಚಿಸಿತ್ತು.

ಕೆಲ ತಿಂಗಳುಗಳ ಹಿಂದೆ ತವರಿಗೆ ಹೋದ ಆಕೆ ತನ್ನೊಂದಿಗೆ ಓದುತ್ತಿದ್ದ ತನ್ನ ಆತ್ಮೀಯ ಸ್ನೇಹಿತೆಯೊಂದಿಗೆ ಈ ಕುರಿತು ನೋವನ್ನು ತೋಡಿಕೊಂಡಾಗ ಸ್ನೇಹಿತೆ ಹೇಳಿದ ಮಾತುಗಳು ಆಕೆಯ ಕಣ್ಣಿಗೆ ಕಟ್ಟಿದ ಪರದೆಯನ್ನು ಕೊಂಚ ತೆರೆಯಿತು. ತನ್ನ ತಾಯಿಯ ತವರು ಮನೆಯಿಂದ ತನಗೆ ದೊರೆತ ಆಸ್ತಿಯ ಕಾಗದ ಪತ್ರಗಳು, ಒಡವೆ ವಸ್ತುಗಳು ಅತ್ತೆಯ ಅಲಮಾರಿಯಲ್ಲಿ ಇರುವುದು ಹಾಗೂ ಆಕೆ ಅದನ್ನು ತಮ್ಮ ಕುಟುಂಬಕ್ಕೆ ಕೊಡುಗೆಯಾಗಿ ಬಂದದ್ದು ಎಂದು ಹೇಳುವ ಮೂಲಕ ಅದನ್ನು ಕುಟುಂಬದ ಆಸ್ತಿಯಾಗಿ ಪರಿಗಣಿಸುತ್ತಿರುವುದು ತಪ್ಪು ಎಂಬುದು ಆಕೆಗೆ ಅರಿವಾಯಿತು. ಮರಳಿ ಬಂದ ನಂತರ ಅದೊಂದು ಬಾರಿ ಚಿನ್ನದ ಒಡವೆಗಳನ್ನು ಸಂಬಂಧಿಕರ ಮನೆಯ ಮದುವೆಗೆ ಹೋದಾಗ ಅತ್ತೆಯ ತಿಜೋರಿಯ ಸೇಫ್ ನಿಂದ ಹೊರ ತೆಗೆದು ಉಪಯೋಗಿಸಿ ಮರಳಿ ಎತ್ತಿಡುವಾಗ ತನ್ನೆಲ್ಲ ಶೈಕ್ಷಣಿಕ ಕಾಗದ ಪತ್ರಗಳನ್ನು ತೆಗೆದುಕೊಳ್ಳುವುದರ ಜೊತೆಗೆ ಆಸ್ತಿಯ ಪತ್ರಗಳನ್ನು ಹಾಗೂ ಒಡವೆಗಳನ್ನು ಸುಮಾ ಎತ್ತಿಟ್ಟುಕೊಂಡಳು. ಇಂದು ಅತ್ತೆಯ ಕಾಠಿಣ್ಯದ ಆಜ್ಞೆಗಳು ಆಕೆಯ ಮನಸ್ಸಿನಲ್ಲಿ ಹರಳುಗಟ್ಟುತ್ತಿದ್ದ ಯೋಚನೆಗಳಿಗೆ ಅಂತಿಮ ಸ್ವರೂಪವನ್ನು ನೀಡಿದವು ಅಂತೆಯೇ ಕೇಸರಿಬಾತ್ ಮತ್ತು ಉಪ್ಪಿಟ್ಟನ್ನು ಮಾಡಿ ಪೂರೈಸಿ ಎಲ್ಲವನ್ನು ಒಂದೆಡೆ ಟೇಬಲ್ ಮೇಲೆ ಜೋಡಿಸಿ ಇಟ್ಟ ಆಕೆ ಅದರ ಬಳಿ ತಾನು ಮನೆ ಬಿಟ್ಟು ಹೋಗುತ್ತಿರುವುದಾಗಿ ಬರೆದ ಕಾಗದವೊಂದನ್ನು ಇಟ್ಟಳು. ತೀವ್ರ ಆಯಾಸದಿಂದ ತನ್ನ ಕೋಣೆಗೆ ಬಂದ ಆಕೆ ಸ್ನಾನ ಮಾಡಿ ಆರಾಮದಾಯಕ ಉಡುಪೊಂದನ್ನು ಧರಿಸಿ ಒಂದಷ್ಟು ಬಟ್ಟೆಗಳನ್ನು, ಹಾಗೂ ಒಳಉಡುಪುಗಳನ್ನು ತನ್ನ ಬ್ಯಾಗಿನಲ್ಲಿ ಇಟ್ಟುಕೊಂಡು ಅವಶ್ಯಕ ಕಾಗದ ಪತ್ರಗಳನ್ನು ಜೋಡಿಸಿಟ್ಟುಕೊಂಡು ದೇವರ ಕೋಣೆಗೆ ಬಂದು ದೀಪವನ್ನು ಮುಡಿಸಿ ದೇವರಿಗೆ ನಮಸ್ಕರಿಸಿ ದೃಢ ನಿರ್ಧಾರದಿಂದ ತನ್ನ ಬ್ಯಾಗಿನೊಂದಿಗೆ ಮನೆಯ ಹೊರಗೆ ಕಾಲಿಟ್ಟಳು. ಮನೆಯ ಬಾಗಿಲನ್ನು ದಾಟಿ ರಸ್ತೆಗೆ ಬರುತ್ತಿದ್ದಂತೆಯೇ ಎದುರಿಗೆ ಕಂಡ ಆಟೋವೊಂದನ್ನು ಕೂಗಿ ಕರೆದ ಆಕೆ ಢವಗುಡುತ್ತಿದ್ದ ಎದೆಯ ಬಡಿತವನ್ನು ಸ್ಥಿಮಿತಕ್ಕೆ ತರಲು ಪ್ರಯತ್ನಿಸುತ್ತಾ ಅದರಲ್ಲಿ ಕುಳಿತು ರೈಲು ನಿಲ್ದಾಣಕ್ಕೆ ಹೋಗುವಂತೆ ನಿರ್ದೇಶಿಸಿ ಹಿಂದಕ್ಕೊರಗಿ ಕುಳಿತುಕೊಂಡಳು. ಇತ್ತ ಮನೆಯಲ್ಲಿ ಆಕೆಯ ಸುಳಿವಿರದೆ ಮನೆಯ ಎಲ್ಲೆಡೆ ಹುಡುಕಲು ಆರಂಭಿಸಿದರು. ಟೇಬಲ್ ನ ಮೇಲಿದ್ದ ಕಾಗದವನ್ನು ಓದಿದ ಮಾವ ನಖಶಿಖಾಂತ ಬೆವೆತರೆ ಅತ್ತೆ ಕ್ರೋಧದಿಂದ ತಪ್ತಳಾದಳು.

ಗಂಡ ಆಕೆಗೆ ಕರೆ ಮಾಡಿದ. ಕರೆಯನ್ನು ಆಕೆ ಸ್ವೀಕರಿಸಿದ ಕೂಡಲೇ 'ಎಲ್ಲಿರುವೆ ಸುಮಾ, ಮನೆಯಲ್ಲಿ ಎಲ್ಲರೂ ಗಾಬರಿಯಾಗಿದ್ದಾರೆ' ಎಂದು ಕೇಳಿದ. ನಾನು ಮನೆ ಬಿಟ್ಟು ಹೊರಟಿದ್ದೇನೆ. ನಿಮಗೆ ಬೇಕಾದ ಅಡುಗೆಯನ್ನು ಮಾಡಿ ಟೇಬಲ್ ಮೇಲೆ ಇಟ್ಟಿದ್ದೇನೆ ಎಂದು ಅತ್ಯಂತ ಶಾಂತವಾಗಿ ಆಕೆ ಹೇಳಿದಳು.

'ಮನೆಗೆ ಅಷ್ಟೊಂದು ಜನ ಬರುತ್ತಿದ್ದಾರೆ ಅಂತಹದರಲ್ಲಿ ಮನೆಯ ಸೊಸೆಯಾಗಿ ನೀನೇ ಇಲ್ಲವೆಂದರೆ ಹೇಗೆ ?' ಎಂದು ಸುದೀಪ್ ಕೇಳಿದ. ನಿಮಗೆ ಬೇಕಾಗಿರುವುದು ಮನೆಯ ಸೊಸೆಯಲ್ಲ ಕೇವಲ ಕೆಲಸದಾಕೆ. ಕಳೆದ ನಾಲ್ಕು ವರ್ಷಗಳಲ್ಲಿ ನಾನು ಆ ಮನೆಯ ಸೊಸೆಯಾಗಿ ಕಾರ್ಯನಿರ್ವಹಿಸುವುದಕ್ಕಿಂತ ಹೆಚ್ಚಾಗಿ ಕೆಲಸದವಳಾಗಿ ಬದುಕಿದ್ದೆ ಎಂಬುದು ನಿಮಗಿಂತ ಚೆನ್ನಾಗಿ ಬೇರೆ ಯಾರಿಗೆ ಗೊತ್ತು ? ಎಂದು ಆಕೆ ತುಸು ತೀಕ್ಷ್ಣವಾಗಿ ಹೇಳಿದಳು. ಆಕೆಯ ಧ್ವನಿಯಲ್ಲಿದ್ದ ತೀಕ್ಷ್ಣತೆ ಹಾಗೂ ಗಟ್ಟಿತನವನ್ನು ಗುರುತಿಸಿದ ಆಟೋ ಡ್ರೈವರ್ ಜೋರಾಗಿ ಕೇಳಿಸುತ್ತಿದ್ದ ಸ್ಪೀಕರ್ ನ ಕಿವಿಯನ್ನು ಮೆಲ್ಲನೆ ತಿರುವಿ ನಂತರ ತನ್ನ ಆಟೋ ನಿಲ್ಲಿಸಿ 'ಮೇಡಂ, ಎಲ್ಲಿಗೆ ಹೋಗಬೇಕು? ಎಂದು ತಗ್ಗಿದ ದನಿಯಲ್ಲಿ ಕೇಳಿದ. ಕೂಡಲೇ ಎಚ್ಚೆತ್ತು ಸುಮಾ 'ರೈಲ್ವೇ ಸ್ಟೇಷನ್ ಗೆ ನಡೆಯಿರಿ ಅಣ್ಣ ' ಎಂದು ಹೇಳಿದಳು. ಸ್ಟೇಷನ್ ಗೆ ಬಂದ ಆಕೆ ಮೈಸೂರಿಗೆ ತೆರಳುವ ರೈಲನ್ನು ಏರಿ ಕುಳಿತಳು. ಅತ್ತೆಯ ಮನೆಯ ಯಾವೊಬ್ಬ ಸದಸ್ಯರ ಫೋನ್ ಕರೆಯನ್ನು ಆಕೆ ಸ್ವೀಕರಿಸಲಿಲ್ಲ.... ಗಂಡನದ್ದು ಕೂಡ. ರೈಲು ಮೈಸೂರನ್ನು ತಲುಪಿದಾಗ ಆಟೋ ಏರಿದ ಆಕೆ ತನ್ನ ಚಿಕ್ಕಮ್ಮನ ಮನೆಗೆ ಬಂದು ಬಾಗಿಲು ತಟ್ಟಿದಳು. ಬಾಗಿಲನ್ನು ತೆರೆದ ಚಿಕ್ಕಮ್ಮ ಈಕೆಯನ್ನು ನೋಡಿದ ಕೂಡಲೇ ಆಶ್ಚರ್ಯದಿಂದ ನಿಂತಳು. ನಾನು ಮತ್ತೆ ಮರಳಿ ಗಂಡನ ಮನೆಗೆ ಹೋಗಲು ಸಿದ್ದವಿಲ್ಲ ಚಿಕ್ಕಮ್ಮ ಎಂದು ಹೇಳಿದಾಗ ಅಕ್ಕನ ಮಗಳನ್ನು ಮೆದುವಾಗಿ ತಬ್ಬಿ ಒಳಗೆ ಕರೆದೊಯ್ದ ಚಿಕ್ಕಮ್ಮ ಆಕೆಗೆ ಸಾಂತ್ವನ ಹೇಳಿ ಮುಖ ತೊಳೆದು ಬರಲು ಹೇಳಿ ಬಿಸಿ ತಿಂಡಿಯನ್ನು ಹಾಕಿ ಕೊಟ್ಟರು. ತಿಂಡಿಯನ್ನು ತಿನ್ನುತ್ತಲೇ ನಡೆದ ವಿಷಯವನ್ನು ಆಕೆ ಹೇಳಿದಳು.

ಅಂದು ಅವರ ಕುಟುಂಬದ ವಾಟ್ಸಪ್ ಗುಂಪಿನಲ್ಲಿ ಆ ದಿನ ಮುಂಜಾನೆ ಸುಮಳ ಅತ್ತೆಯ ಮನೆಯಲ್ಲಿ ನಡೆದ ವಿಷಯದ ಚರ್ಚೆ ಆಗಲಾರಂಭಿಸಿತು. ಕುಟುಂಬದ ಹಿರಿಯರು ಮನೆಯ ವಿಷಯವನ್ನು ಹೀಗೆ ಹೊರಗೆ ತರುವ ಅವಶ್ಯಕತೆ ಇದೆ ಎಂಬಂತೆ ಗುಂಪಿನಲ್ಲಿ ಚರ್ಚಿಸಿದಾಗ ಸುಮಾಳ ಮುಖದಲ್ಲಿ ವಿಷಾದದ ಕಿರುನಗೆ ಮೂಡಿತು. ಮನೆಯ ನಾಲ್ಕು ಗೋಡೆಗಳ ಒಳಗೆ ಈ ಕುರಿತು ಚರ್ಚಿಸಲು ಮನೆಯವರು ತಯಾರಿರಲಿಲ್ಲವಾದ ಕಾರಣ ಮನೆಯ ಸಮಸ್ಯೆ ನಾಲ್ಕು ಜನರಿಗೆ ತಿಳಿಯುವಂತೆ ಮಾಡಬೇಕಾಯಿತು ಎಂದು ಬರೆದ ಆಕೆ ಅದನ್ನು ಗುಂಪಿನಲ್ಲಿ ಹಂಚಿಕೊಂಡಳು.. ಎಲ್ಲರ ಬಾಯಿಗೆ ಬೀಗ ಬಿದ್ದಂತಾಯಿತು. ಮುಂದಿನ ಎರಡು ದಿನಕ್ಕೆ ಮೈಸೂರಿಗೆ ಬಂದಿಳಿದ ಸುದೀಪ್ ಆಕೆಯ ಮನವೊಲಿಸಲು ಪ್ರಯತ್ನಿಸಿದ. ಕಳೆದ ನಾಲ್ಕು ವರ್ಷಗಳಲ್ಲಿ ಕೇವಲ ತನ್ನ ತಾಯಿಯ ಕುರಿತು ಮಾತ್ರ ಯೋಚಿಸಿದ್ದ ಪತಿಯನ್ನು ನಂಬಲು ಸುಮ ಸಿದ್ಧವಿರಲಿಲ್ಲ. ನಿರಾಶನಾಗಿ ಹಿಂದಿರುಗಿದ ಪತಿ. ಮತ್ತೆ ಒಂದು ವಾರದ ಬಳಿಕ ಮರಳಿ ಬಂದ. ಆತನ ಮುಖದಲ್ಲಿ ಗಾಂಭೀರ್ಯವಿತ್ತು. ಕೇವಲ ಒಂದೇ ವಾರದಲ್ಲಿ ಹತ್ತು ವರ್ಷ ಹೆಚ್ಚು ವಯಸ್ಸಾದಂತೆ ತೋರುತ್ತಿದ್ದ ಆತ ಈ ಬಾರಿ ಆಕೆಯನ್ನು ಮರಳಿ ಬಾ ಎಂದು ಅಂಗಲಾಚಲಿಲ್ಲ. ಬದಲಾಗಿ ತಾನು ತಮ್ಮಿಬ್ಬರ ಕುರಿತು ಮಾತನಾಡಿದ್ದು ಇನ್ನು ಮುಂದೆ ಆಕೆಯ ಎಲ್ಲ ಚಟುವಟಿಕೆಗಳಿಗೆ ಬೆಂಬಲವಾಗಿ ನಿಲ್ಲುವ, ಆಕೆಗೆ ಬೇಕಾದ ಎಲ್ಲಾ ಅಗತ್ಯ ಸಹಾಯಗಳನ್ನು ನೀಡುವುದಾಗಿ ಹೇಳಿದ. ಆಕೆಗೆ ತನ್ನೊಂದಿಗೆ ಬಾಳಲು ಇಷ್ಟವಿಲ್ಲ ಎಂದಾದರೆ ವಿಚ್ಛೇದನ ನೀಡಲು ಕೂಡ ಸಿದ್ಧ ಎಂದು ಹೇಳಿದ. ' ನನಗೆ ಯೋಚಿಸಲು ಕೊಂಚ ಸಮಯ ಬೇಕು' ಎಂದಷ್ಟೇ ಹೇಳಿದ ಆಕೆಯ ಮಾತನ್ನು ಗೌರವಿಸಿ ಮರಳಿ ಊರಿಗೆ ಹೊರಟು ಹೋದ. ಒಂದೆರಡು ವಾರಗಳು ಕಳೆದ ಬಳಿಕ ತನ್ನ ಚಿಕ್ಕಮ್ಮನ ಸಹಾಯದಿಂದ ಆಕೆ ಉದ್ಯೋಗಸ್ಥ ಜನರಿಗೆ ಕ್ಯಾರಿಯರ್ ಊಟ ತಲುಪಿಸುವ ಕೆಲಸವನ್ನು ಆರಂಭಿಸಿದಳು. ಮೊದಲ ವಾರ ಕೇವಲ ಎಂಟು ಜನರಿಂದ ಆರಂಭವಾದ ಆಕೆಯ ಕ್ಯಾರಿಯರ್ ಊಟದ ಸರ್ವಿಸ್ ಕೆಲವೇ ವಾರಗಳಲ್ಲಿ 40 ರಿಂದ 50 ಜನರಿಗೆ ವಿಸ್ತಾರವಾಯಿತು. ಕೈಯಲ್ಲಿ ಎರಡರಿಂದ ಮೂರು ಆಳುಗಳನ್ನು ಕೆಲಸಕ್ಕೆ ಇಟ್ಟುಕೊಂಡ ಆಕೆ ಇದೀಗ ತುಸು ದೊಡ್ಡ ಪ್ರಮಾಣದಲ್ಲಿ ಮನೆಯ ಹಿಂಭಾಗದಲ್ಲಿ ಶೆಡ್ ಹಾಕಿಸಿ ಅಲ್ಲಿ ರುಚಿ ಹಾಗೂ ಶುಚಿಗೆ ಹೆಸರಾದ ಪುಟ್ಟ ಕ್ಯಾರಿಯರ್ ಸರ್ವಿಸನ್ನು ಆರಂಭಿಸಿದರು. ಪ್ರತಿ ಶನಿವಾರ ಸಾಯಂಕಾಲ ಬರುತ್ತಿದ್ದ ಸುದೀಪ ಸಲಹೆ ಸೂಚನೆಗಳನ್ನು ಹಾಗೂ ಸಹಾಯ ಸಹಕಾರಗಳನ್ನು ನೀಡುತ್ತಿದ್ದ. ತಾನೇ ಲಿಸ್ಟ್ ಮಾಡಿಕೊಂಡು ಆಕೆಯ ಕೇಟರಿಂಗ್ ಕೆಲಸಕ್ಕೆ ಬೇಕಾಗುವ ಪದಾರ್ಥಗಳನ್ನು ತಂದು ಕೊಡುತ್ತಿದ್ದ... ಆದರೆ ಅವರಿಬ್ಬರ ಮಧ್ಯದಲ್ಲಿ ಇದ್ದುದು ದಾಂಪತ್ಯವಲ್ಲ ಕೇವಲ ಸ್ನೇಹ ಭಾವ. ಇದೀಗ ಆತನಲ್ಲಿ ಪತಿಯ ಜವಾಬ್ದಾರಿಯ ಅರಿವು ಮೂಡಿದ್ದು ಜೀವನಪೂರ್ತಿ ಆಕೆಗಾಗಿ ಕಾಯಲು ಆತ ಸಿದ್ದನಿದ್ದ. ಸರಿಸುಮಾರು ಆರು ತಿಂಗಳ ನಂತರ ತನ್ನ ನೌಕರಿಗೆ ವರ್ಗಾವಣೆ ಮಾಡಿಸಿಕೊಂಡು ಆತ ಮೈಸೂರಿಗೆ ಬಂದು ನೆಲೆಸಿದ.... ಈಗಲೂ ಕೂಡ ಆತನಲ್ಲಿ ಈ ಹಿಂದೆ ತಾವು ನಡೆದುಕೊಂಡ ರೀತಿಯ ಕುರಿತು ಪಶ್ಚಾತ್ತಾಪದ ಭಾವವಿದ್ದು, ಇನ್ನು ಮುಂದೆ ಆಕೆಗೆ ನೋವಾಗದಂತೆ ಬದುಕಬೇಕು ಎಂಬ ನಿರ್ಧಾರ ಕೂಡ ಇತ್ತು.

ಅದೊಂದು ದಿನ ಆಕೆಯ ಅತ್ತೆ ಮಾವ ಬಂದು ಇಳಿದರು. ಅವರಿಬ್ಬರ ಮುಖದಲ್ಲಿ ಸೋತು ಹೋದ ಭಾವವಿತ್ತು. ಕೊನೆಗೂ ನೀನು ನಿನ್ನ ಹಟ ಸಾಧಿಸಿದೆ ಎಂದು ಅತ್ತೆ ಹೇಳಿದಾಗ ನಸುನಕ್ಕ ಸುಮತಿ ಒಳ್ಳೆಯತನವನ್ನು ಕೈಲಾಗದತನ ಎಂದು ತಿಳಿದುಕೊಳ್ಳುವುದು ತಪ್ಪು ಅತ್ತೆ, ನಾವು ಹಿರಿಯರಿಗೆ ಕೊಡುವ ಗೌರವವನ್ನು ಅವರು ಭಯ, ಹೆದರಿಕೆ ಎಂದು ಭಾವಿಸಬಾರದು. ದಾಂಪತ್ಯದಲ್ಲಿ ಗಂಡ ಹೆಚ್ಚು ಹೆಂಡತಿ ಕಡಿಮೆ ಎಂಬ ಭಾವ ಎಂದಿಗೂ ಬೇಡ... ಅವರಿಬ್ಬರೂ ಪರಸ್ಪರರಿಗೆ ಪೂರಕವಾಗಿ ಬದುಕಬೇಕು. ಒಬ್ಬರು ಕೇವಲ ಪಡೆಯುವ ಹಾಗೂ ಮತ್ತೊಬ್ಬರು ಕೊಟ್ಟು ಬರಿದಾಗುವ ಪ್ರಕ್ರಿಯೆ ದಾಂಪತ್ಯದಲ್ಲಿ ಖಂಡಿತವಾಗಿಯೂ ಸಲ್ಲದು. ಇಬ್ಬರೂ ಪರಸ್ಪರರಿಗೆ ಕೊಟ್ಟು ಪಡೆದುಕೊಳ್ಳುವ ರೀತಿಯನ್ನು ಪ್ರೋತ್ಸಾಹಿಸಬೇಕು. ನೀವು ನಿಮ್ಮ ಅತ್ತೆಯಿಂದ ಶೋಷಿತರಾಗಿದ್ದೀರಿ ಎಂದ ಮಾತ್ರಕ್ಕೆ ನಿಮ್ಮ ಸೊಸೆಯನ್ನು ನೀವು ಕೀಳಾಗಿ ನೋಡಬೇಕಾದ ಅಗತ್ಯವಿಲ್ಲ ಆ ತಪ್ಪನ್ನು ಸರಿಪಡಿಸಿ ನೀವು ನನ್ನನ್ನು ಓರ್ವ ಮನುಷ್ಯಳಂತೆ ನೋಡಿದ್ದರೆ ಸಾಕಿತ್ತು, ಅದರ ಬದಲಾಗಿ ನೀವು ನನ್ನನ್ನು ಅತ್ಯಂತ ಅಸಹಾಯಕಳು ಹಾಗೂ ಕೆಲಸದವಳು ಎಂಬಂತೆ ಬಿಂಬಿಸಿದಿರಿ. ಇದು ನಿಮ್ಮ ತಪ್ಪಲ್ಲವೇ ಇನ್ನು ಮಾವನಾಗಲಿ ಸುದೀಪ್ ಆಗಲಿ ನಿಮ್ಮ ಮಾತಿಗೆ ಬದಲು ಹೇಳಲಿಲ್ಲ, ಅವರೆಲ್ಲರೂ ನಿಮ್ಮ ಮಾತಿಗೆ ಬದ್ಧರಾಗಿ ನಿಂತರು..... ಇಲ್ಲಿ ಯಾರು ಸರಿ ಯಾರು ತಪ್ಪು ಎಂಬುದಕ್ಕಿಂತ ನಡೆಯುತ್ತಿದ್ದ ತಪ್ಪನ್ನು ತಿದ್ದಿ ಹೇಳುವವರು ಇಲ್ಲದೆ ಹೋದಾಗ ಆಗುವ ಅನಾಹುತಗಳ ಅರಿವು ಮುಖ್ಯವಾಗಬೇಕಿತ್ತು. ಆದರೆ ಅವರಾರೂ ನಿಮಗೆ ನಿಮ್ಮ ತಪ್ಪನ್ನು ತೋರಿಸಲೇ ಇಲ್ಲ... ಪರಿಣಾಮವೇ ಇಂತಹ ವಿಷಮ ಸ್ಥಿತಿಯನ್ನು ನಾವು ಎದುರಿಸಬೇಕಾಗಿದ್ದು ಎಂದು ಹೇಳಿದಾಗ ಆಕೆಯ ಗಂಡ ಮತ್ತು ಮಾವ ತಲೆ ತಗ್ಗಿಸಿ ತಮ್ಮ ಸಮ್ಮತಿಯನ್ನು ಸೂಚಿಸಿದರು. ನಾನು ಮನೆಯನ್ನು ಬಿಟ್ಟು ಬಂದದ್ದು ಒಂದು ಹೊಸ ಮುನ್ನುಡಿಯನ್ನು ಬರೆಯಲೆಂದೇ ಹೊರತು ಎಲ್ಲವನ್ನು ಧಿಕ್ಕರಿಸಲು ಅಲ್ಲ. ಈಗಲೂ ನೀವೆಲ್ಲರೂ ಸಮ್ಮತಿಸುವುದಾದರೆ ನಾನು ನಿಮ್ಮೊಂದಿಗೆ ಇರಲು ಸಿದ್ದ.... ಆದರೆ ನಾನು ನನ್ನ ಉದ್ಯೋಗವನ್ನು ಕೈಬಿಡುವುದಿಲ್ಲ.

ನನ್ನ ದುರ್ಬರ ಗಳಿಗೆಗಳಲ್ಲಿ ನನ್ನ ಕೌಶಲ ನನ್ನ ಕೈ ಹಿಡಿದಿದೆ ಇದೀಗ ಆ ಕೆಲಸವೇ ನನ್ನನ್ನು ಮುನ್ನಡೆಸಬೇಕು ನನ್ನಂತಹ ನೂರಾರು ಜನರಿಗೆ ದಾರಿ ದೀಪವಾಗಬೇಕು ಎಂದು ಆಕೆ ಹೇಳಿದಾಗ ಸುದೀಪ ಸಮ್ಮತಿಯ ಮುದ್ರೆ ಎಂಬಂತೆ ಆಕೆಯ ಎರಡು ಕೈಗಳನ್ನು ತನ್ನ ಕೈಗಳಲ್ಲಿ ತೆಗೆದುಕೊಂಡು ಮೆದುವಾಗಿ ಅದುಮಿದ. ಅತ್ತೆ ಮಾವರ ಕಣ್ಣುಗಳಲ್ಲಿ ಇದ್ದ ಪಶ್ಚಾತಾಪದ ಭಾವ ಮರೆಯಾಗಿ ಇದೀಗ ಹೊಳಪು ಕಂಡಿತು. ಅವರಿಬ್ಬರ ಭಾವಗಳು ಒಪ್ಪಿಗೆಯನ್ನು ಸೂಚಿಸುತ್ತಿತ್ತು. ತನ್ನ ಗೃಹತ್ಯಾಗ ಹೊಸ ಮುನ್ನುಡಿಯನ್ನು ಬರೆಯಿತು ಎಂಬ ತೃಪ್ತ ಭಾವದಿಂದ ತನ್ನ ಕೈ ಹಿಡಿದ ಪತಿಯ ಕೈಯಲ್ಲಿ ತನ್ನ ಕೈಯನ್ನು ಆಕೆ ಗಟ್ಟಿಯಾಗಿ ಬೆಸೆದಳು.



ವೀಣಾ ಹೇಮಂತ್ ಗೌಡ ಪಾಟೀಲ್

# ನಿಲ್ಲಿಸಿದ್ದ ಖಾಸಗಿ ಬಸ್‌ಗೆ ಬೈಕ್ ಡಿಕ್ಕಿ : ದಂಪತಿ ದುರ್ಮರಣ

ಬಲಿಯಾ: ರಸ್ತೆ ಬದಿಯಲ್ಲಿ ನಿಲ್ಲಿಸಲಾಗಿದ್ದ ಖಾಸಗಿ ಬಸ್‌ಗೆ ಮೋಟಾರ್ ಸೈಕಲ್ ಡಿಕ್ಕಿ ಹೊಡೆದ ಪರಿಣಾಮ ದಂಪತಿ ಸಾವನ್ನಪ್ಪಿದ ದುರ್ಘಟನೆ ಉತ್ತರ ಪ್ರದೇಶದ ಬಲಿಯಾ ಜಿಲ್ಲೆಯಲ್ಲಿ ನಡೆದಿದೆ.



ರಸ್ರಾ ಕೋಟ್ವಾಲಿ ಪೊಲೀಸ್ ಠಾಣೆ ವ್ಯಾಪ್ತಿಯ ಗಢಿಯಾ ರೈಲ್ವೆ ಕ್ರಾಸಿಂಗ್ ಸಮೀಪ ಈ ಅಪಘಾತ ಸಂಭವಿಸಿದೆ. ಪೈಕೌಲಿ ಪತೇಪುರ ಗ್ರಾಮದ ವಿನೋದ್ ಪ್ರಜಾಪತಿ (35) ಅವರ ಪತ್ನಿ ಮುನ್ನಿ ದೇವಿ (30) ಮೃತ ದಂಪತಿ. ಕೆಲಸ ಮುಗಿಸಿ ಮೌನಲ್ಲಿರುವ ತಮ ಮನೆಗೆ ಮೋಟಾರ್‌ಸೈಕಲ್‌ನಲ್ಲಿ ದಂಪತಿ ಹಿಂದಿರುಗುತ್ತಿದ್ದರು. ಈ ವೇಳೆ ರಸ್ರಾ–ಮೌ ಮಾರ್ಗದಲ್ಲಿ ರಸ್ತೆ ಬದಿಯಲ್ಲಿ ನಿಲ್ಲಿಸಿದ್ದ ಖಾಸಗಿ ಬಸ್‌ಗೆ ಬೈಕ್ ನಿಯಂತ್ರಣ ತಪ್ಪಿ ಡಿಕ್ಕಿ ಹೊಡೆದಿದೆ. ಅಪಘಾತದಲ್ಲಿ ವಿನೋದ್ ಪ್ರಜಾಪತಿ ಮತ್ತು ಮುನ್ನಿ ದೇವಿ ಗಂಭೀರವಾಗಿ ಗಾಯಗೊಂಡಿದ್ದರು. ಅವರನ್ನು ತಕ್ಷಣ ರಸ್ರಾದ ಸಮುದಾಯ ಆರೋಗ್ಯ ಕೇಂದ್ರಕ್ಕೆ ದಾಖಲಿಸಲಾಯಿತಾದರೂ, ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ಸಂಜೆ ಇಬ್ಬರೂ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ರಸ್ರಾ ಕೋಟ್ವಾಲಿ ಠಾಣೆಯ ಪ್ರಭಾರಿ ಯೋಗೇಂದ್ರ ಬಹದ್ದೂರ್ ಸಿಂಗ್ ಅವರ ಪ್ರಕಾರ, ಘಟನೆ ಕುರಿತು ಮಾಹಿತಿ ದೊರೆಯುತ್ತಿದ್ದಂತೆಯೇ ಪೊಲೀಸರು ಸ್ಥಳಕ್ಕೆ ಧಾವಿಸಿ ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಿದ್ದರು. ಪ್ರಕರಣದ ಕುರಿತು ಹೆಚ್ಚಿನ ತನಿಖೆ ಮುಂದುವರಿದಿದೆ ಎಂದು ಪೊಲೀಸರು ತಿಳಿಸಿದ್ದಾರೆ.

# ದಳಪತಿ ಬರ್ತ್‌ಡೇ ಸ್ಪೇಷಲ್, ಮೃಗಾಲಯಗಳಿಗೆ ಉಚಿತ ಎಂಟ್ರಿ

ಚೆನ್ನೈ: ತಮಿಳುನಾಡು ಮುಖ್ಯಮಂತ್ರಿ ಸಿ ಜೋಸೆಫ್ ವಿಜಯ್ ಅವರ ಜನ್ಮದಿನದ ಅಂಗವಾಗಿ ಸಾರ್ವಜನಿಕರಿಗೆ ಮೃಗಾಲಯಗಳಿಗೆ ಉಚಿತ ಪ್ರವೇಶ ನೀಡಲು ನಿರ್ಧರಿಸಲಾಗಿದೆ.
ರಾಜ್ಯ ಸರ್ಕಾರ ಜೂನ್ 21 ಮತ್ತು 22 ರಂದು ಪ್ರಾಣಿಶಾಸ್ತ್ರೀಯ ಉದ್ಯಾನವನಗಳಲ್ಲಿ ಪ್ರವೇಶ ಶುಲ್ಕವನ್ನು ವಿನಾಯಿತಿ ನೀಡುವುದಾಗಿ ಘೋಷಿಸಿದೆ.



ಈ ಕ್ರಮವನ್ನು ಪ್ರಕಟಿಸಿದ ಸಚಿವ ರಂಜಿತ್ ಕುಮಾರ್ ಅವರು, ಯುವ ಸಂದರ್ಶಕರ ಆನಂದಕ್ಕಾಗಿ ಈ ಉಪಕ್ರಮವನ್ನು ವಿಶೇಷವಾಗಿ ಆಯೋಜಿಸಲಾಗಿದೆ ಎಂದು ಸುದ್ದಿಗಾರ–ರಿಗೆ ತಿಳಿಸಿದರು. ಮಕ್ಕಳು ನಮಗೆ ದೇವರಿದ್ದಂತೆ. ಅವರ ಸಂತೋಷಕ್ಕಾಗಿ ನಾವು ಇದನ್ನು ವ್ಯವಸ್ಥೆ ಮಾಡಿದ್ದೇವೆ ಎಂದು ಸಚಿವರು ಹೇಳಿದರು. ಮುಖ್ಯಮಂತ್ರಿಗಳ ಜನ್ಮದಿನವು ಜೂನ್ 22 ರಂದು ಬರುತ್ತದೆ ಮತ್ತು ಎರಡು ದಿನಗಳ ವಿನಾಯಿತಿ ಆಡಳಿತದ ಸಂಭ್ರಮಾಚರಣೆಯ ಕ್ರಮಗಳ ಭಾಗವಾಗಿದೆ.

# ಆರ್‌ಎಸ್‌ಎಸ್ ಕಚೇರಿ ಮೇಲೆ ಪೆಟ್ರೋಲ್ ಬಾಂಬ್ ಎಸೆದವರ ಬಂಧನ

ರಾಂಚಿ: ಜಾರ್ಖಂಡ್‌ನ ರಾಂಚಿಯಲ್ಲಿರುವ ಆರ್‌ಎಸ್‌ಎಸ್ ಕಚೇರಿಯ ಮೇಲೆ ಪೆಟ್ರೋಲ್ ಬಾಂಬ್ ಎಸೆದ ಆರೋಪದ ಮೇಲೆ ಇಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ತಡರಾತ್ರಿ ಲೋಹರ್ದಗಾ ಜಿಲ್ಲೆಯಿಂದ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದ್ದು, ಅವರು ಬಳಸಿದ್ದ ಕಾರನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.




ನಿವರಣ್‌ಪುರ ಪ್ರದೇಶದಲ್ಲಿರುವ ತನ್ನ ಕಚೇರಿಯ ಮೇಲೆ ಪೆಟ್ರೋಲ್ ಬಾಂಬ್ ಎಸೆಯಲಾಗಿದೆ ಎಂದು ರಾಷ್ಟ್ರೀಯ ಸ್ವಯಂಸೇವಕ ಸಂಘ (ಆರ್‌ಎಸ್‌ಎಸ್) ನಿನ್ನೆ ಮುಂಜಾನೆ ಆರೋಪಿಸಿತ್ತು, ಇದರಿಂದಾಗಿ ಪೊಲೀಸರು ಈ ಬಗ್ಗೆ ತನಿಖೆ ನಡೆಸಲು ವಿಶೇಷ ತನಿಖಾ ತಂಡವನ್ನು ರಚಿಸಿದರು.ಪ್ರಕರಣ–ಕ್ಕೆ ಸಂಬಂಧಿಸಿದಂತೆ ಇಬ್ಬರು ವ್ಯಕ್ತಿಗಳನ್ನು ಬಂಧಿಸಲಾಗಿದೆ. ಅವರನ್ನು ವಿಚಾರಣೆ ನಡೆಸಲಾಗುತ್ತಿದೆ ಎಂದು ರಾಂಚಿಯ ಹಿರಿಯ ಪೊಲೀಸ್ ವರಿಷ್ಠಾಧಿಕಾರಿ (ಎಸ್‌ಎಸ್‌ಪಿ) ರಾಕೇಶ್ ರಂಜನ್ ಪಿಟಿಐಗೆ ತಿಳಿಸಿದ್ದಾರೆ. ತನಿಖೆಯ ಸಮಯದಲ್ಲಿ, ಪೊಲೀಸರು ಸ್ಥಳದಿಂದ ಗಾಜಿನ ಬಾಟಲಿಗಳ ಚೂರುಗಳನ್ನು ವಶಪಡಿಸಿಕೊಂಡಿದ್ದಾರೆ.ಬಾಟಲಿಗಳಲ್ಲಿರುವ ವಿಷಯಗಳನ್ನು ಖಚಿತಪಡಿಸಿಕೊಳ್ಳಲು ವಿಧಿವಿಜ್ಞಾನ ತಂಡವು ಸ್ಥಳಕ್ಕೆ ಭೇಟಿ ನೀಡಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಬಾಂಬ್ ಪತ್ತೆ ಮತ್ತು ವಿಲೇವಾರಿ ದಳವು ಆರ್‌ಎಸ್–ಎಸ್ ಕಚೇರಿಗೆ ಭೇಟಿ ನೀಡಿತು. ಬಾಟಲಿಗಳಲ್ಲಿರುವ ವಸ್ತುಗಳು ಪೆಟ್ರೋಲ್ ಆಗಿರಬಹುದು ಎಂದು ಶಂಕಿಸಲಾಗಿದೆ ಎಂದು ಮತ್ತೊಬ್ಬ ಅಧಿಕಾರಿ ತಿಳಿಸಿದ್ದಾರೆ, ಐಇಡಿ ಅಥವಾ ಬಾಂಬ್‌ನಂತಹ ಯಾವುದೇ ಸ್ಫೋಟಕ ವಸ್ತು ಕಂಡುಬಂದಿಲ್ಲ ಎಂದು ಹೇಳಿದರು.

**ಜನಶ್ರೀ ಟೈಮ್ಸ್**
**ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.**

# ಮಾಜಿ ಪ್ರಧಾನಿಯ ಪುತ್ರನಿಗೆ 7.8 ಕೋಟಿ ಸೈಬರ್ ವಂಚನೆ ; 4 ಕೋಟಿ ಹಣ ಸ್ಥಗಿತಗೊಳಿಸಿದ ಪೊಲೀಸರು

ನವದೆಹಲಿ: ಭಾರತದ ಮಾಜಿ ಪ್ರಧಾನಿ ಇಂದರ್ ಕುಮಾರ್ ಗುಜ್ರಾಲ್ ಅವರ ಪುತ್ರ ಹಾಗೂ ಮಾಜಿ ರಾಜ್ಯಸಭಾ ಸದಸ್ಯ ನರೇಶ್ ಗುಜ್ರಾಲ್ ಅವರು 7.8 ಕೋಟಿ ಸೈಬರ್ ವಂಚನೆಗೆ ಒಳಗಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ವಂಚಕರು ಆನ್‌ಲೈನ್ ಸಂದೇಶ ಕಳುಹಿಸುವ ಅಪ್ಲಿಕೇಶನ್‌ನಲ್ಲಿ ನರೇಶ್ ಗುಜ್ರಾಲ್ ಅವರ ಹೆಸರಿನಲ್ಲಿ ನಕಲಿ ಖಾತೆ ಸೃಷ್ಟಿಸಿ, ಅವರ ಕಂಪನಿಯ ಹಣಕಾಸು ಸಿಬ್ಬಂದಿಯನ್ನು ಮೋಸಗೊಳಿಸಿ ಹಣ ವರ್ಗಾಯಿಸುವಂತೆ ಸೂಚನೆ ನೀಡಿದ್ದರು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರಲ್ಲಿ ಇ–ಎಫ್‌ಐಆರ್ ದಾಖಲಾಗಿದ್ದು, ತನಿಖೆ ಆರಂಭಿಸಲಾಗಿದೆ. ಪೊಲೀಸರ ಪ್ರಕಾರ, ಇದೇ ಜೂನ್ 12ರಿಂದ 16ರವರೆಗೆ ಈ ವಂಚನೆ ನಡೆದಿದೆ. ಆರೋಪಿಗಳು ನರೇಶ್ ಗುಜ್ರಾಲ್ ಅವರ ಛಾಯಾಚಿತ್ರವನ್ನು ಬಳಸಿ ಸಂದೇಶ ಅಪ್ಲಿಕೇಶನ್‌ನಲ್ಲಿ ನಕಲಿ ಖಾತೆ ತೆರೆದು ಅವರಂತೆ ನಟಿಸಿದ್ದಾರೆ. ನಂತರ ಕಂಪನಿಯ ಉದ್ಯೋಗಿಯೊಬ್ಬರಿಗೆ ತುರ್ತು ವ್ಯವಹಾ–ರಿಕ ಅಗತ್ಯಕ್ಕಾಗಿ ನಿರ್ದಿಷ್ಟ ಬ್ಯಾಂಕ್ ಖಾತೆಗೆ



ರಿಯಲ್ ಟೈಮ್ ಗ್ರಾಸ್ ಸೆಟಲ್‌ಮೆಂಟ್ ಮೂಲಕ ಹಣ ವರ್ಗಾಯಿಸುವಂತೆ ಸಂದೇಶ ಕಳುಹಿಸಿದ್ದಾರೆ.

ಸೂಚನೆಗಳು ನಿಜವಾಗಿಯೂ ಗುಜ್ರಾಲ್ ಅವರಿಂದ ಬಂದಿವೆ ಎಂದು ನಂಬಿದ ಉದ್ಯೋಗಿ, ಅವರಿಗೆ ನೀಡಲಾಗಿದ್ದ ಹಣಕಾಸು ಅಧಿಕಾರದ ಆಧಾರದ ಮೇಲೆ ನಾಲ್ಕು ದಿನಗಳ ಅವಧಿಯಲ್ಲಿ ನಾಲ್ಕು ಪ್ರತ್ಯೇಕ ವಹಿವಾಟುಗಳನ್ನು ನಡೆಸಿದ್ದಾರೆ. ಇದರ ಪರಿಣಾಮ 7.8 ಕೋಟಿ ಹಣ ವಂಚಕರ ಖಾತೆಗಳಿಗೆ ವರ್ಗಾವಣೆಯಾಗಿದೆ. ಜೂನ್ 16ರಂದು ಈ ವಹಿವಾಟುಗಳ ಬಗ್ಗೆ ಗುಜ್ರಾಲ್ ಅವರ ಪುತ್ರಿಗೆ ಮಾಹಿತಿ ದೊರೆತಿದ್ದು, ಅವರು ತಕ್ಷಣ ತಂದೆಯೊಂದಿಗೆ ಪರಿಶೀಲನೆ ನಡೆಸಿದ್ದಾರೆ.

ಆ ವೇಳೆ ನರೇಶ್ ಗುಜ್ರಾಲ್ ಅವರು ಇಂತಹ ಯಾವುದೇ ಸೂಚನೆ ನೀಡಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದರಿಂದ ಕುಟುಂಬದವರು ಹಾಗೂ ಕಂಪನಿಯ ಸಿಬ್ಬಂದಿ ತಾವು ನಕಲಿ ಗುರುತು ಬಳಸಿ ನಡೆಸಿದ ಸೈಬರ್ ವಂಚನೆಗೆ ಬಲಿಯಾಗಿರುವುದು ಅರಿವಿಗೆ ಬಂದಿದೆ.
ತನಿಖಾಧಿಕಾರಿಗಳ ಪ್ರಕಾರ, ತಕ್ಷಣ ಕೈಗೊಂಡ ಕ್ರಮದಿಂದ ವಂಚನೆಗೊಂಡ ಮೊತ್ತದ ಸುಮಾರು 70 ಪ್ರತಿಶತದಷ್ಟು ಹಣವನ್ನು ರಕ್ಷಿಸಲು ಸಾಧ್ಯವಾಗಿದೆ.
ವಂಚನೆಗೆ ಸಂಬಂಧಿಸಿದ ಹಲವು ಬ್ಯಾಂಕ್ ಖಾತೆಗಳ ಮೇಲೆ ನಿರ್ಬಂಧ ವಿಧಿಸುವ ಮೂಲಕ ಸುಮಾರು 4 ಕೋಟಿ ಹಣವನ್ನು ಸ್ಥಗಿತಗೊಳಿಸಲಾಗಿದೆ. ಪ್ರಸ್ತುತ ಪೊಲೀಸರು ಹಣದ ಹರಿವಿನ ಮಾರ್ಗವನ್ನು ಪತ್ತೆಹಚ್ಚುವ ಹಾಗೂ ಹಣದ ಅಂತಿಮ ಫಲಾನುಭವಿಗಳನ್ನು ಗುರುತಿಸುವ ಕಾರ್ಯದಲ್ಲಿ ತೊಡಗಿದ್ದಾರೆ. ಈ ಘಟನೆ, ಉನ್ನತ ಮಟ್ಟದ ವ್ಯಕ್ತಿಗಳ ಹೆಸರನ್ನು ದುರುಪಯೋಗಪಡಿಸಿಕೊಂಡು ನಡೆಯುತ್ತಿರುವ ಸೈಬರ್ ವಂಚನೆಗಳ ಬಗ್ಗೆ ಮತ್ತೊಮ್ಮೆ ಎಚ್ಚರಿಕೆಯ ಗಂಟೆ ಮೊಳಗಿಸಿದ್ದು, ಯಾವುದೇ ಹಣಕಾಸು ಸೂಚನೆಯನ್ನು ಅನುಷ್ಠಾನಗೊಳಿಸುವ ಮುನ್ನ ನೇರ ದೃಢೀಕರಣ ಮಾಡಿಕೊಳ್ಳುವ ಅಗತ್ಯವನ್ನು ಒತ್ತಿ ಹೇಳಿದೆ.

# ನಾವು ತಮಿಳುನಾಡಿನ ರೈತರ ಹಿತ ಕಾಪಾಡಬೇಕು : ಸಿಎಂ ಡಿ ಕೆ ಶಿವಕುಮಾರ್

ಬೆಂಗಳೂರು: "ಮೇಕೆದಾಟು ಯೋಜನೆ ದಕ್ಷಿಣ ಭಾರತದ ಹೃದಯದಂತ ಯೋಜನೆ. ಈ ಯೋಜನೆಯಲ್ಲಿ ಕರ್ನಾಟಕ ಹಾಗೂ ತಮಿಳುನಾಡಿನ ಹಿತ ಅಡಗಿದೆ" ಎಂದು ಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದಲ್ಲಿ ವಿಧಾನ ಪರಿಷತ್ ಚುನಾವಣೆ ಮತದಾನದ ಬಳಿಕ ಶಿವಕುಮಾರ್ ಅವರು ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯೆ ನೀಡಿದರು.

ತಮಿಳುನಾಡು ಸರ್ಕಾರ ನಿಮ್ಮ ಹೃದಯಕ್ಕೆ ಹತ್ತಿರವಾದ ಮೇಕೆದಾಟು ಯೋಜನೆ ತಡೆಯಲು ಕಾನೂನು ಅವಕಾಶ ಹುಡುಕುತ್ತಿದೆ ಎಂದು ಕೇಳಿದಾಗ, "ಮೇಕೆದಾಟು ಕೇವಲ ನನ್ನ ಹೃದಯಕ್ಕೆ ಮಾತ್ರ ಹತ್ತಿರವಾಗಿಲ್ಲ. ಮೇಕೆದಾಟು ಯೋಜನೆ ಕರ್ನಾಟಕ ರಾಜ್ಯಕ್ಕಿಂತ ತಮಿಳುನಾಡಿಗೆ ಹೆಚ್ಚು ಅನುಕೂಲ ನೀಡಲಿದೆ. ತಮಿಳುನಾಡು ಪಾಲಿನ 177 ಟಿಎಂಸಿ ನೀರನ್ನು ಬಿಡಲು ನಾವು ಸಿದ್ಧವಾಗಿದ್ದೇವೆ. ಈ ಬಗ್ಗೆ ಸುಪ್ರೀಂ ಕೋರ್ಟ್ ಆದೇಶವೂ ಇದೆ. ಈ ಯೋಜನೆ ತೀರ್ಮಾನವನ್ನು ಕೇಂದ್ರ ಜಲ ಆಯೋಗ ಮಾಡಬೇಕು ಎಂದು ಕೋರ್ಟ್ ತಿಳಿಸಿದೆ" ಎಂದು ತಿಳಿಸಿದರು.

ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ : "ನಾವು ತಮಿಳುನಾಡಿನ ರೈತರ ಹಿತವನ್ನೂ ಕಾಪಾಡಬೇಕು. ಇದು ಸಮತೋಲಿತ ಜಲಾನಯನ. ಇಲ್ಲಿ ಒಂದೇ ಒಂದು ಬಕೆಟ್ ನೀರನ್ನೂ ನೀರಾವರಿಗೆ ಬಳಸುವುದಿಲ್ಲ. ಬೆಂಗಳೂರು ನಗರದ ಕುಡಿಯುವ ನೀರು ಪೂರೈಕೆಗೆ ಮಾತ್ರ ಬಳಸಲಾಗುವುದು. ಬೆಂಗಳೂರಿನಲ್ಲಿ ಜನಸಂಖ್ಯೆ ಹೆಚ್ಚಾಗುತ್ತಿದ್ದು, ನಾವು ಕೃಷ್ಣಾದಿಂದ ನೀರನ್ನು ತರಲು ಸಾಧ್ಯವಿಲ್ಲ. ಹೀಗಾಗಿ ಕಾವೇರಿ ನಮ್ಮ ಮುಂದಿರುವ ಏಕೈಕ ಆಯ್ಕೆ" ಎಂದು ತಿಳಿಸಿದರು.

ಮೇಕೆದಾಟು ಯೋಜನೆ ರದ್ದುಗೊಳಿಸಲು ಪ್ರಧಾನಿ ಮೋದಿ ಅವ–ರಿಗೆ ಮನವಿ ಮಾಡಿರುವ ಬಗ್ಗೆ ಕೇಳಿದಾಗ, "ತಮಿಳುನಾಡಿನವರು ಕಳೆದ 40 ವರ್ಷಗಳಿಂದ ರಾಜಕೀಯ ಅಜೆಂಡಾ ಇಟ್ಟುಕೊಂಡಿದ್ದಾರೆ. ಅವರ ರಾಜಕೀಯದಲ್ಲಿ ನಾನು ಹಸ್ತಕ್ಷೇಪ ಮಾಡುವುದಿಲ್ಲ. ಈ ವಿಚಾರದ ಬಗ್ಗೆ ನ್ಯಾಯಾಲಯ ನಿರ್ದೇಶನ ನೀಡಿದೆ. ಕಳೆದ ವರ್ಷ 400ಕ್ಕೂ ಹೆಚ್ಚು ಟಿಎಂಸಿ ಹೆಚ್ಚುವರಿ ನೀರು ಸಮುದ್ರ ಸೇರಿದೆ. ಅವರು ಕೆಳ ಹಂತದಲ್ಲಿ ಸಾಕಷ್ಟು ಅಣೆಕಟ್ಟು ನಿರ್ಮಾಣ ಮಾಡುತ್ತಿದ್ದು, ನಾವು ಯಾವುದಕ್ಕೂ ಆಕ್ಷೇಪ ವ್ಯಕ್ತಪಡಿಸಿಲ್ಲ. ಅವರ ನೆಲದಲ್ಲಿ ಅವರು ನಿರ್ಮಿಸಿಕೊಳ್ಳುತ್ತಿದ್ದಾರೆ. ಇದೇ ವಿಚಾರ ಸುಪ್ರೀಂ ಕೋರ್ಟ್ ನಲ್ಲೂ ಚರ್ಚೆಯಾಗಿದೆ. ಈ ಯೋಜನೆಗೆ ನಾವು ಯಾವುದೇ ಆರ್ಥಿಕ ನೆರವಾಗಲಿ ಇತರೆ ವಿಚಾರವನ್ನು ಕೇಳುತ್ತಿಲ್ಲ. ಈ ಯೋಜನೆಯಿಂದ 400 ಮೆ.ವ್ಯಾಟ್ ವಿದ್ಯುತ್ ಉತ್ಪಾದನೆ ಮಾಡುವುದು ಇಂಧನ ಕ್ಷೇತ್ರದಲ್ಲಿ ನಮಗೆ ಅನುಕೂಲ ಮಾಡಿಕೊಡಲಿದೆ" ಎಂದರು.

ತಮಿಳುನಾಡು ಜೊತೆ ಯಾವಾಗ ಬೇಕಾದರೂ ಚರ್ಚೆಗೆ ಸಿದ್ಧ : ಈ ವಿಚಾರವಾಗಿ ತಮಿಳುನಾಡು ಜೊತೆ ಚರ್ಚೆ ಮಾಡುತ್ತೀರಾ ಎಂದು ಕೇಳಿದಾಗ, "ಯಾವಾಗ ಬೇಕಾದರೂ ಅವರ ಜೊತೆ ಮಾತನಾಡಲು ಸಿದ್ಧನಿದ್ದೇನೆ, ತಮಿಳುನಾಡು, ಕರ್ನಾಟಕದವರು ಭಾರತೀಯರು. ನಾವು ಕಾವೇರಿ ನೀರು ಕುಡಿಯಬೇಕು. ತಮಿಳುನಾಡಿನಿಂದ ಇಲ್ಲಿಗೆ ಬಂದು ವೃತ್ತಿ ಮಾಡುತ್ತಿರುವ ಅನೇಕ ಜನ–ರಿದ್ದಾರೆ. ಇಲ್ಲಿಂದ ಹೋಗಿ ಅಲ್ಲಿ ಕೆಲಸ ಮಾಡುತ್ತಿರುವವರೂ ಇದ್ದಾರೆ. ನಾವು ಅವರನ್ನು ಪ್ರತ್ಯೇಕಿಸುವುದಿಲ್ಲ. ಸಮತೋಲಿತ ಜಲಾನಯನ ನಿರ್ಮಾಣದಿಂದ ಕಷ್ಟ ಕಾಲದಲ್ಲಿ ತಮಿಳುನಾಡಿನ ಪಾಲಿನ ನೀರನ್ನು ಹರಿಸಲು ನೆರವಾಗುತ್ತದೆ. ಅತಿ ಕಡಿಮೆ ವೆಚ್ಚದಲ್ಲಿ ಯೋಜನೆ ಆಗುವ ವಿಶ್ವಾಸವಿದೆ" ಎಂದು ತಿಳಿಸಿದರು.

ನಮ್ಮ ಎಲ್ಲಾ ಸಂಸದರು ಒಗ್ಗಟ್ಟಾಗಿ ಹೋರಾಡುವ ವಿಶ್ವಾಸವಿದೆ : ತಮಿಳುನಾಡು ಅನಗತ್ಯ ಕ್ಯಾತೆ ತೆಗೆಯುತ್ತಿಲ್ಲವೇ ಎಂದು ಕೇಳಿದಾಗ, "ಅವರು ರಾಜಕೀಯ ಉಳಿವಿಗಾಗಿ ಧ್ವನಿ ಎತ್ತುತ್ತಿದ್ದಾರೆ. ಸುಪ್ರೀಂ ಕೋರ್ಟ್ ತ್ರಿಸದಸ್ಯ ಪೀಠ ತೀರ್ಪು ಬಂದ ಬಳಿಕ ಮತ್ತೇನಿದೆ? ಕರ್ನಾಟಕ 177 ಟಿಎಂಸಿ ನೀರು ಬಿಡಬೇಕು ಎಂದು ನೀಡಿದ ನಿರ್ದೇಶನವನ್ನು ನಾವು ಒಪ್ಪಿಕೊಳ್ಳಲಿಲ್ಲವೇ?" ಎಂದು ತಿಳಿಸಿದರು. ರಾಜ್ಯದ ಬಿಜೆಪಿ ಸಂಸದರು ಇದರ ಬಗ್ಗೆ ಹೋರಾಟ ಮಾಡಬೇಕಲ್ಲವೇ ಎಂದಾಗ, "ಅವರು ಹೋರಾಟ ಮಾಡುತ್ತಾರೆ. ನಮ್ಮ ರಾಜ್ಯದಿಂದ ಆಯ್ಕೆಯಾಗಿರುವ ಕಾಂಗ್ರೆಸ್, ಬಿಜೆಪಿ, ದಳ ಎಲ್ಲಾ ಸಂಸದರು ಒಗ್ಗಟ್ಟಾಗಿ ನಮ್ಮ ರಾಜ್ಯದ ಹಿತ ಕಾಪಾಡುತ್ತಾರೆ ಎಂಬ ವಿಶ್ವಾಸ ನಮಗಿದೆ" ಎಂದು ತಿಳಿಸಿದರು. ತಮಿಳುನಾಡಿನಲ್ಲಿ ನಿಮ್ಮ ಮೈತ್ರಿ ಇದೆ ಎಂದು ಕೇಳಿದಾಗ, "ನಾವು ಅವರಿಗೆ ಏನು ಮನವಿ ಮಾಡಬೇಕೋ ಮನವಿ ಮಾಡುತ್ತೇವೆ. ಇಲ್ಲಿ ರಾಜಕಾರಣ ಏನಿಲ್ಲ. ಎರಡು ರಾಜ್ಯಗಳ



ಜನರ ಹಿತ ಕಾಪಾಡಿಕೊಂಡು ಹೋಗೋಣ" ಎಂದರು.

**ಪರಿಷತ್ ಚುನಾವಣೆ ಅಡ್ಡಮತದಾನದ ಅಗತ್ಯವಿಲ್ಲ :**

ಪರಿಷತ್ ಚುನಾವಣೆಯಲ್ಲಿ ಬಹಳಷ್ಟು ತಂತ್ರಗಾರಿಕೆ ಮಾಡಲಾಗಿದೆ ಎಂದು ಕೇಳಿದಾಗ, "ನಾವು ಯಾವುದೇ ತಂತ್ರಗಾ–ರಿಕೆ ಮಾಡಿಲ್ಲ. ಅದರ ಅವಶ್ಯಕತೆ ಇಲ್ಲ. ಎಲ್ಲರೂ ಪ್ರಜ್ಞಾವಂತರು, ಬುದ್ಧಿವಂತರಿದ್ದು, ಜನರ ಪ್ರತಿನಿಧಿಗಳಾಗಿದ್ದಾರೆ. ಅವರು ತಮ್ಮ ಸ್ವಇಚ್ಛೆ ಮೇಲೆ ಯಾರಿಗೆ ಮತ ಹಾಕಬೇಕೋ ಹಾಕಿದ್ದಾರೆ. ನಾನು ನಮ್ಮ ಶಾಸಕರ ಜೊತೆ ಎರಡು ದಿನ ಕಾಲ ಕಳೆದಿದ್ದೇನೆ ಹೊರತು, ಬೇರೆ ಯಾವ ತಂತ್ರಗಾರಿಕೆ ಮಾಡಿಲ್ಲ" ಎಂದು ತಿಳಿಸಿದರು.

ಪರಿಷತ್ ಚುನಾವಣೆಯಲ್ಲಿ ಬಿಜೆಪಿ ಹಾಗೂ ಜೆಡಿಎಸ್ ನಿಂದ ಕಾಂಗ್ರೆಸ್ ಅಭ್ಯರ್ಥಿಗೆ ಅಡ್ಡಮತದಾನ ನಡೆದಿದೆ ಎಂಬ ವಿಚಾರವಾಗಿ ಕೇಳಿದಾಗ, "ನಾವು ಯಾವುದೇ ಅಡ್ಡಮತದಾನದಲ್ಲಿ ಭಾಗಿಯಾಗಿಲ್ಲ, ಅದರ ಬಗ್ಗೆ ಮಾಹಿತಿಯೂ ಇಲ್ಲ. ಇದು ರಹಸ್ಯ ಮತವಾಗಿದ್ದು, ಫಲಿತಾಂಶ ಬರುವವರೆಗೂ ಕಾಯೋಣ. ಅಡ್ಡಮತದಾನ ಯಾವ ಕಾರಣಕ್ಕೆ ಆಗುತ್ತದೆ? ನಮ್ಮ ಶಾಸಕರ ಮತವನ್ನು ನಮ್ಮ ಅಭ್ಯರ್ಥಿಗೆ ಹಾಕುವಂತೆ ಕೇಳಿಕೊಂಡಿದ್ದೇವೆ. ಅಭ್ಯರ್ಥಿಗಳು ಏನೇನು ಮಾಡಿಕೊಂಡಿದ್ದಾರೋ ಗೊತ್ತಿಲ್ಲ" ಎಂದರು.

ರೆಸಾರ್ಟ್ ಸೇರಿದ್ದರ ಬಗ್ಗೆ ಕೇಳಿದಾಗ, "ಪರಿಷತ್ ಚುನಾವಣೆಯಲ್ಲಿ ಹೇಗೆ ಮತದಾನ ಮಾಡಬೇಕು ಎಂದು ಮಾರ್ಗದರ್ಶನ ಹಾಗೂ ತರಬೇತಿ ನೀಡಿದ್ದೇವೆ. ಇಲ್ಲಿ ಆದ್ಯತೆ ಮತ ಚಲಾವಣೆಯಲ್ಲಿ ಗುರುತು ಮಾಡುವಾಗ ಅನೇಕ ವ್ಯತ್ಯಾಸಗಳಾಗುತ್ತವೆ. ನಮ್ಮಲ್ಲಿ 60–70 ಶಾಸಕರು ಹೊಸಬರಾಗಿದ್ದು, ಅವರಿಗೆ ಆದ್ಯತೆ ಮತದ ಬಗ್ಗೆ ಅರಿವು ಮೂಡಿಸಿದ್ದೇವೆ. ಶಿಕ್ಷಕರು ಹಾಗೂ ಪದವೀಧರ ಕ್ಷೇತ್ರದ ಚುನಾವಣೆಯಲ್ಲಿ ಸುಮಾರು 7–8 ಸಾವಿರ ಮತಗಳು ತಿರಸ್ಕೃತಗೊಳ್ಳುತ್ತವೆ" ಎಂದು ತಿಳಿಸಿದರು.

ಬಿಜೆಪಿ ಉಚ್ಚಾಟಿತ ಶಾಸಕರು ನಿಮ್ಮ ಜೊತೆ ಕಾಣಿಸಿಕೊಂಡಿದ್ದಾರೆ ಎಂದು ಕೇಳಿದಾಗ, "ರಾಜ್ಯದ 224 ಶಾಸಕರೂ ನನ್ನ ಜೊತೆ ಆತ್ಮೀಯರಾಗಿದ್ದಾರೆ. ನಾನು 224 ಶಾಸಕರಿಗೂ ಮುಖ್ಯಮಂತ್ರಿ. ನಾನು ಒಂದು ಪಕ್ಷಕ್ಕೆ ಮುಖ್ಯಮಂತ್ರಿ ಅಲ್ಲ. ಎಲ್ಲರೂ ನಮ್ಮ ಸಹೋದರರೇ" ಎಂದು ತಿಳಿಸಿದರು. ಕಾಂಗ್ರೆಸ್ ಅಭ್ಯರ್ಥಿ ಪರವಾಗಿ ಇದ್ದೇವೆ ಎಂದು ತಿಳಿಸಿದ್ದಾರೆ ಎಂದು ಕೇಳಿದಾಗ, "ಇದು ಗೌಪ್ಯ ಮತದಾನವಾಗಿರುವುದರಿಂದ ಅವರು ಯಾರಿಗೆ ಮತ ಹಾಕಿದ್ದಾರೆ ಎಂದು ನಮಗೆ ಗೊತ್ತಿಲ್ಲ. ನಾನು ದುರ್ಬಿನು ಹಾಕಿ ನೋಡಲು ಸಾಧ್ಯವಿಲ್ಲ" ಎಂದು ತಿಳಿಸಿದರು.

**ಅಸೂಯೆಗೆ ಮದ್ದಿಲ್ಲ :**

ಕುಮಾರಸ್ವಾಮಿ ಅವರ ಟೀಕೆ ಬಗ್ಗೆ ಕೇಳಿದಾಗ, "ಅಸಂಬದ್ಧ ಹೇಳಿಕೆಗಳಿಗೆಲ್ಲ ನಾನು ಪ್ರತಿಕ್ರಿಯೆ ನೀಡುವುದಿಲ್ಲ. ಈ ರೀತಿ ಮಾತನಾಡುವುದು ಅವರ ಮಟ್ಟಕ್ಕೆ ಸರಿಯಲ್ಲ ಅಥವಾ ಈ ಮಟ್ಟಕ್ಕೆ ಇಳಿದು ಅವರು ಮಾತನಾಡಬಾರದು. ಈ ಮಾತುಗಳು ಅವರ ಘನತೆಗೆ ಸೂಕ್ತವಾದುದಲ್ಲ. ಅವರು ತಮ್ಮ ಹಿರಿತನ ಕಾಪಾಡಿಕೊಂಡು ಹೋದರೆ ಒಳ್ಳೆಯದು. ಅಸೂಯೆಗೆ ಮದ್ದಿಲ್ಲ ಎಂದಷ್ಟೇ ನಾನು ಹೇಳಬಹುದು" ಎಂದು ತಿಳಿಸಿದರು. ದೆಹಲಿಗೆ ಹೋಗುತ್ತಿದ್ದೀರಾ ಎಂದು ಕೇಳಿದಾಗ, "ತಿರುಪತಿ ತಿಮ್ಮಪ್ಪನ ದರ್ಶನಕ್ಕೆ ಹೋಗುತ್ತಿದ್ದೇನೆ" ಎಂದು ತಿಳಿಸಿದರು.

# ಕ್ರೊಯೇಷಿಯಾ ಮಣಿಸಿದ ಇಂಗ್ಲೆಂಡ್ ಭರ್ಜರಿ ಗೆಲುವು

ಆರ್ಲಿಂಗ್ಟನ್ (ಟೆಕ್ಸಾಸ್): ಕ್ರೊಯೇಷಿಯಾದ ಸ್ಟ್ರೈಕರ್ ಪೆಟರ್ ಮೂಸಾ ವಿಶ್ವಕಪ್‌ನಲ್ಲಿ ತಮ ಮೊದಲ ಗೋಲು ದಾಖಲಿಸಿದರೂ, ಅವರ ತಂಡ ಇಂಗ್ಲೆಂಡ್ ವಿರುದ್ಧ 4–2 ಅಂತರದ ಸೋಲು ಅನುಭವಿಸಿತು. ಪ್ರಸ್ತುತ ಎಫ್‌ಸಿ ಡಲ್ಲಾಸ್ ತಂಡದ ಪರ ಆಡುತ್ತಿರುವ ಮೂಸಾ, ಡಲ್ಲಾಸ್ ಪ್ರದೇಶದಲ್ಲಿ ಸಾಕಷ್ಟು ಗೋಲುಗಳನ್ನು ಗಳಿಸಿರುವ ಅನುಭವ ಹೊಂದಿದ್ದಾರೆ. ಇದೀಗ ಅವರು ಫುಟ್‌ಬಾಲ್‌ನ ಅತಿದೊಡ್ಡ ವೇದಿಕೆಯಾದ ವಿಶ್ವಕಪ್‌ನಲ್ಲೂ ಗೋಲು ದಾಖಲಿಸುವ ಮೂಲಕ ಗಮನ ಸೆಳೆದಿದ್ದಾರೆ.

ಪಂದ್ಯದಲ್ಲಿ ಮೊದಲಾರ್ಧದ ಹೆಚ್ಚುವರಿ ಸಮಯದ ಕೊನೆಯ ಕ್ಷಣದಲ್ಲಿ ಮೂಸಾ ಸಮಬಲದ ಗೋಲು ಗಳಿಸಿದರು. ಇದರೊಂದಿಗೆ ವಿಶ್ವಕಪ್‌ನಲ್ಲಿ ಯುರೋಪಿನ ತಂಡದ ಪರ ಗೋಲು ಗಳಿಸಿದ ಮೂರನೇ ಮೇಜರ್ ಲೀಗ್ ಸಾಕರ್ ಆಟಗಾರ ಎಂಬ ಹೆಗ್ಗಳಿಕೆಗೆ ಪಾತ್ರರಾದರು.



ಪಂದ್ಯದ ಬಳಿಕ ಮಾತನಾಡಿದ ಮೂಸಾ, ತವ–ರಿನಂತಿರುವ ಈ ಮೈದಾನದಲ್ಲಿ ಗೋಲು ಗಳಿಸಿದ್ದು ಅದ್ಭುತ ಅನುಭವ. ಆದರೆ ಪಂದ್ಯದಲ್ಲಿ ಸೋತಿ–ರುವುದರಿಂದ ಸಂತೋಷವಿಲ್ಲ. ಸೋಲಿನ ಬಳಿಕ ಸಂಭ್ರಮಿಸಲು ಹೆಚ್ಚು ಏನೂ ಇಲ್ಲ ಎಂದು ಹೇಳಿದರು. 28 ವರ್ಷದ ಮೂಸಾ ಈ ಮೂಲಕ ಡಲ್ಲಾಸ್ ಪ್ರದೇಶದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ಗಳಿಸಿದ ಗೋಲುಗಳ ಸಂಖ್ಯೆಯನ್ನು 32ಕ್ಕೆ ಏರಿಸಿಕೊಂಡರು. ಈ ಋತುವಿನಲ್ಲಿ ನಲ್ಲಿ 12 ಗೋಲುಗಳೊಂದಿಗೆ ಅವರು ಲಿಯೋನೆಲ್ ಮೆಸ್ಸಿಅವರೊಂದಿಗೆ ಜಂ–ಟಿಯಾಗಿ ಎರಡನೇ ಸ್ಥಾನದಲ್ಲಿದ್ದಾರೆ. ಅಮೆರಿಕದ ಲೀಗ್‌ನಲ್ಲಿ ಅವರ ಒಟ್ಟು ಗೋಲುಗಳ ಸಂಖ್ಯೆ 46ಕ್ಕೆ ತಲುಪಿದೆ. ಪಂದ್ಯದಲ್ಲಿ ಕ್ರೊಯೇಷಿಯಾ 2–1 ಹಿನ್ನಡೆಯಲ್ಲಿದ್ದಾಗ, ಮಾರಿಯೊ ಪಸಾಲಿಚ್ ನೀಡಿದ ಪಾಸ್ ಅನ್ನು ಇವಾನ್ ಪೆರಿಸಿಚ್ ಹೆಡರ್ ಮೂಲಕ ಮೂಸಾಗೆ ತಲುಪಿಸಿದರು. ಚೆಂಡು ನೆಲಕ್ಕೆ ಬೀಳುವ ಮುನ್ನವೇ ಮೂಸಾ ಅದನ್ನು ಗೋಲಾಗಿ ಪರಿವರ್ತಿಸಿ, ಇಂಗ್ಲೆಂಡ್ ಗೋಲ್‌ಕೀಪರ್ ಜೋರ್ಡನ್ ಪಿಕ್‌ಫೋರ್ಡ್ ಅವರನ್ನು ಮಣಿಸಿದರು. ಗೋಲು ಆದ ತಕ್ಷಣವೇ ಮೊದಲಾರ್ಧದ ಅಂತ್ಯಕ್ಕೆ ಸೀಟಿ ಮೊಳಗಿತು. ಆದ–'ರೆ ಎರಡನೇರ್ಧ ಆರಂಭವಾಗಿ ಕೇವಲ ಎರಡು ನಿಮಿಷಗಳಲ್ಲಿ ಜೂಡ್ ಬೆಲ್ಲಿಂಗ್ಹ್ಯಾಮ್ ಇಂಗ್ಲೆಂಡ್‌ಗೆ ಮುನ್ನಡೆ ತಂದುಕೊಡುವ ಗೋಲುಗಳಿಸಿದರು. ಬಳಿಕ 66ನೇ ನಿಮಿಷದಲ್ಲಿ ಕ್ರೊಯೇಷಿಯಾ ಕೋಚ್ ಝ್ಲಾಟ್ಕೊ ಡಾಲಿಕ್ ಅವರು ಮೂಸಾ ಬದಲಿಗೆ ಇಗೋರ್ ಮತಾನೋವಿಚ್ ಅವರನ್ನು ಕಣಕ್ಕಿಳಿಸಿದರು. ಈ ಕುರಿತು ಪ್ರತಿಕ್ರಿಯಿಸಿದ ಮೂಸಾ, ಕೋಚ್ ಅವರೇ ಮುಖ್ಯಸ್ಥರು. ನಿರ್ಧಾರ ಅವರದ್ದು. ಸಾಕಷ್ಟು ಓಡಿದ್ದರಿಂದ ನಾನು ಆಯಾಸಗೊಂಡಿದ್ದೆಎಂದರು. ಇಂಗ್ಲೆಂಡ್ ಭರ್ಜರಿ ಗೆಲುವಿನೊಂದಿಗೆ ಅಂಕ ಪಟ್ಟಿಯಲ್ಲಿ ಮೇಲೇರಿದೆ.

"JANASHREE TIMES" Kannada daily morning Owner, Published by ANANDAYYA DANAYYA VIRAKTAMATH Address: 229/1, 3 RD CROSS VIVEKANAND NAGAR NEAR WATER TANK, GADAG, KARNATAKA - 582101. Printed at: SHIVANI PRINTERS Printers. Address: AT: HULKOTI T/D: GADAG OFFICE ADDERS: SHIVANI PRINTERS NEW COURT OPPSITE PLOT NO 28 RS NO 312/3B GARAG COMPLEX, GADAG, KARNATAKA - 582101. email: janashreetimes@gmail.com